# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 230 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 19–04–2024 ಶುಕ್ರವಾರ | ಪುಟ: 4 | ಬೆಲೆ : ರೂ.2–00
Volume - 01 Issue - 230 | Title- Code: KARKAN 28269 | Chitradurga | Date: 19-04-2024 Friday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಚಿತ್ರದುರ್ಗ ಅಭ್ಯರ್ಥಿ ಬಿ.ಎನ್.ಚಂದ್ರಪ್ಪ ಗೆಲುವು ನಿಶ್ಚಿತ : ಟಿ.ರಘುಮೂರ್ತಿ. 2

ಮೋದಿ ಪ್ರಧಾನಿಯಾದಾಗ ಮಾತ್ರ ಮಾದಿಗರ ಮೀಸಲಾತಿ ವರ್ಗೀಕರಣ ಸಾಧ್ಯ: ಮಂದಕೃಷ್ಣ 3

ಸೇವಾ ನ್ಯೂನ್ಯತೆ, ಕೋರ್ಟ್‌ನಿಂದ ರೂ.4.96 ಲಕ್ಷ ನೀಡಲು ಆದೇಶ 4



ಸುದ್ದಿ, ಜಾಹಿರಾತಿಗೆ 9686622252


**ಶುಭ ನುಡಿ**

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

# ಜನರ ಚಿತ್ತ ಹಿರಿಯೂರಿನತ್ತ, ಸಚಿವ ಸುಧಾಕರ್, ಪೂರ್ಣಿಮಾ ಒಗ್ಗಟ್ಟು, ಟೇಕಾಫ್ ಆಗದ ಮೈತ್ರಿ

» ನಮ್ಮ ಜನ ಸಮಾಚಾರ

ಹಿರಿಯೂರು: ರಾಜ್ಯದಲ್ಲಿ ಅತ್ಯಂತ ಅದೃಷ್ಟದ ಕ್ಷೇತ್ರ ಎಂಬ ಖ್ಯಾತಿ ಪಡದಿರುವ ಕ್ಷೇತ್ರ ಹಿರಿಯೂರು ವಿಧಾನ ಸಭಾ ಕ್ಷೇತ್ರವಾಗಿದೆ. ಹಿರಿಯ ದಲಿತ ನಾಯಕರು, ಬುದ್ದಿವಂತ ರಾಜಕಾರಣಿಗಳನ್ನು ನೀಡಿದ್ದು ಹಿರಿಯೂರು ವಿಧಾನ ಸಭಾ ಕ್ಷೇತ್ರ ಪರಿಶಿಷ್ಟ ಮೀಸಲು ಕ್ಷೇತ್ರದಿಂದ ಸಾಮಾನ್ಯ ಕ್ಷೇತ್ರವಾಗಿ ಬದಲಾದ ನಂತರವೂ ಅದೇ ಛಾಪು ಉಳಿಸಿಕೊಂಡಿದೆ. ಇಲ್ಲಿ ಗೆದ್ದವರಿಗೆ ಮಂತ್ರಿ ಯೋಗ ಎಂಬ ಮಾತು ಸಹ ಹಿರಿಯೂರು ಕ್ಷೇತ್ರಕ್ಕಿದೆ. ಈಗ ಜಿಲ್ಲಾ

ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಈ ಕ್ಷೇತ್ರವನ್ನು ಪ್ರತಿನಿಸುತ್ತಿದ್ದು ಜಿಲ್ಲೆಯ ಜನರ ಇತ್ತ ನೋಡುವಂತೆ ಮಾಡಿದೆ.

ನಮ್ಮ ಜನ ವಿಶೇಷ

ಕಳೆದ ಮೂರು ವಿಧಾನ ಸಭಾ ಚುನಾವಣೆಗಳಲ್ಲಿ ಸಚಿವ ಡಿ.ಸುಧಾಕರ್ ಅವರಿಗೆ ಸಾಂಪ್ರದಾಯಿಕ ಎದುರಾಳಿಯಾಗಿದ್ದ ಮಾಜಿ ಸಚಿವ ತನ್ನದೇ ಪ್ರಭಾವ ಹೊಂದಿದ್ದ ಗೊಲ್ಲ ಸಮುದಾಯದ ಪ್ರಶ್ನಾತೀತ ನಾಯಕರಾಗಿ ಎ.ಕೃಷ್ಣಪ್ಪ ಕುಟುಂಬದ ಕುಡಿ ಪೂರ್ಣಿಮಾ ಶ್ರೀನಿವಾಸ್ ಈಗ ಕಾಂಗ್ರೆಸ್ ಸೇರ್ಪಡೆಯಾಗಿರುವುದು,ಪೂರ್ಣಿಮಾ ರವರ ಪತಿ ಶ್ರೀನಿವಾಸ್ ಆಗ್ನೇಯ ಪದವೀಧರ ಕ್ಷೇತ್ರದಿಂದ ಕಾಂಗ್ರೆಸ್ ಅಭ್ಯರ್ಥಿ ಆಗಿದ್ದಯ ಕಾಂಗ್ರೆಸ್ ತನ್ನ ಬಲವನ್ನು ವೃದ್ಧಿಸಿಕೊಂಡಿದೆ.

ಕಾಂಗ್ರೆಸ್ ಅಭ್ಯರ್ಥಿ ಬಿ.ಎನ್. ಚಂದ್ರಪ್ಪ ನಾಮಪತ್ರ ಸಲ್ಲಿಸಿದ ದಿನ ಚಿತ್ರದುರ್ಗ ದಲ್ಲಿ ನಡೆದ ಬಹಿರಂಗ ಸಭೆಯಲ್ಲಿ ಸಿಎಂ ಸಿದ್ದರಾಮಯ್ಯ ಚುನಾವಣಾ ಉಸ್ತುವಾರಿಯನ್ನು ಡಿ.ಸುಧಾಕರ್ ಅವರಿಗೆ ಕರೆದು ಖುದ್ದು ಮಾತನಾಡಿ ಗೆಲ್ಲಬೇಕು ಎಂಬ ಸಂದೇಶ್ ತಿಳಿಸಿ ಸುಧಾಕರ್ ಹೆಗಲಿಗೆ ಗೆಲುವಿನ ಹೊಣೆ ಹೊರಿಸಿರುವ ಕಾರಣ ಜೊತೆಗೆ ಸಚಿವರಾಗಿ ತಮ್ಮ ಶಕ್ತಿ ಸಾಬೀತುಪಡಿಸುವ ಹೊಣೆ ಇರುವುದರಿಂದ ಇಡೀ ಕ್ಷೇತ್ರ ಹಳ್ಳಿ ಹಳ್ಳಿ ಸುತ್ತುತ್ತಿದ್ದು ಪ್ರಚಾರ ಕೈಗೊಂಡಿದ್ದಾರೆ. ನಾಮಪತ್ರ ಸಲ್ಲಿಕೆ, ನಂತರ ಹಿರಿಯೂರಿನಲ್ಲಿ ನಡೆದ ಕಾಂಗ್ರೆಸ್ ಸಭೆಯಲ್ಲಿ ಸುಧಾಕರ್ ಮತ್ತು ಪೂರ್ಣಿಮಾ ಇಬ್ಬರು ಭರ್ಜರಿ ಪ್ರಚಾರ ಆರಂಭಿಸಿದ್ದಾರೆ.

**ಮೈತ್ರಿ ನಾಯಕರು ಇನ್ನೂ ಸಕ್ರಿಯ ಪ್ರಚಾರಕ್ಕೆ ಇಳಿದಿಲ್ಲ:** ಮೈತ್ರಿ ಪಕ್ಷಗಳಾದ ಜೆಡಿಎಸ್, ಬಿಜೆಪಿ ಮುಖಂಡರು ಇನ್ನೂ ಸಕ್ರಿಯ ಪ್ರಚಾರಕ್ಕೆ ಇಳಿದಿಲ್ಲ. ಈಗಾಗಲೇ ಜೆಡಿಎಸ್ ಮತ್ತು ಬಿಜೆಪಿ ಸಮನ್ವಯ ಸಭೆ ನಡೆಸಲಾಗಿದೆ. ಆ ನಂತರ ದೊಡ್ಡ ಮಟ್ಟದ ಪ್ರಚಾರ ನಡೆಸುತ್ತಿರುವುದು ಎಲ್ಲೂ ಕಾಣುತ್ತಿಲ್ಲ. ಕಳೆದ ವಿಧಾನಸಭೆಯಲ್ಲಿ ಸೋಲು ಅನುಭವಿಸಿದ್ದ ಜೆಡಿಎಸ್ ಅಭ್ಯರ್ಥಿ ರವೀಂದ್ರಪ್ಪ ತಮಗಿರುವ ಸಂಪರ್ಕಗಳ ಜತೆ ಸಮನ್ವಯ ಸಾಧಿಸುವ ಪ್ರಯತ್ನದಲ್ಲಿದ್ದಾರೆ. ಜಿಲ್ಲಾ ಜೆಡಿಎಸ್ ಅಧ್ಯಕ್ಷ ಜಯಣ್ಣ, ರಾಜ್ಯ ಮುಖಂಡ ಡಿ.ಯಶೋಧರ ಪ್ರಚಾರ ಸಭೆ ಸಮಾರಂಭಗಳು ಸಿಮೀತವಾಗುತ್ತಿದ್ದು ಹಳ್ಳಿ ಕಡೆ ಪ್ರಚಾರಕ್ಕೆ ಇನ್ನು ಧುಮುಕಿಲ್ಲ.


ಪೂರ್ಣಿಮಾ ಶ್ರೀನಿವಾಸ್ ಬಿಜೆಪಿಯಿಂದ ಕಾಂಗ್ರೆಸ್ ಸೇರ್ಪಡೆಯಾದ ನಂತರ ಹಿರಿಯೂರು ಬಿಜೆಪಿ ಶಕ್ತಿ ಕುಸಿದಿದ್ದು ಅಷ್ಟೊಂದು ಹುಮ್ಮಸ್ಸು ಕಾಣುತ್ತಿಲ್ಲ. ಆದರೆ ಬಿಜೆಪಿ ಲೋಕಸಭೆ ಚುನಾವಣೆಯಲ್ಲಿ ಸ್ವಲ್ಪ ಪ್ರಾಬಲ್ಯ ಸಾಧಿಸಲು ಪ್ರಯತ್ನ ನಡೆಸುತ್ತಿದೆ. ತಾಲೂಕು ಅಧ್ಯಕ್ಷ ವಿಶ್ವನಾಥ್, ಮುಖಂಡರಾದ ಲಕ್ಷ್ಮೀಕಾಂತ್, ದ್ಯಾಮೇಗೌಡ, ಸಮಯ ಮಾಡಿಕೊಂಡು ಬಿಜೆಪಿ ಅಧ್ಯಕ್ಷ ಮುರುಳಿ ಸೇರಿ ಹಲವರು ಹಾಗೂ ಕ್ಷೇತ್ರದಲ್ಲಿರುವ ಮುಖಂಡರು, ಕಾರ್ಯಕರ್ತ ರನ್ನು ಸಮನ್ವಯಗೊಳಿಸುವ ಕೆಲಸದಲ್ಲಿ ನಿರತರಾಗಿದ್ದಾರೆ. ಆದರೆ ಚುನಾವಣೆ ಇನ್ನೂ ಕೆಲವೇ ದಿನಗಳು ಮಾತ್ರ ಇದ್ದರು ಸಹ , ಚುನಾವಣೆಯಲ್ಲಿ ಮೈತ್ರಿ ಪಕ್ಷಗಳ ಪ್ರಚಾರದ ಹುಮ್ಮಸ್ಸು ಎಲ್ಲೂ ಕಾಣುತ್ತಿಲ್ಲ.

ಹಿರಿಯೂರಿನಲ್ಲಿ ಕಾಂಗ್ರೆಸ್ ಸೆಡ್ಡು ಹೊಡೆಯುವಷ್ಟು ಮತದಾರರ ಗಟ್ಟಿಯಾಗಿರು ಮತದಾರರು ಜೆಡಿಎಸ್ ಪಕ್ಷಕ್ಕೂ ಇದ್ದಾರೆ. ಬಿಜೆಪಿಗೆ ದೊಡ್ಡ ಮಟ್ಟದ ಮತದಾರರ ಅಸ್ತಿತ್ವ ಇಲ್ಲ. ಲೋಕಾ ಚುನಾವಣೆಯಲ್ಲಿ ಜೆಡಿಸ್‌ನ ಬಲ ಮೇಲೆ ಬಿಜೆಪಿ ಲೋಕಾ ಚುನಾವಣೆಯಲ್ಲಿ ತನ್ನ ಶಕ್ತಿ ಹೆಚ್ಚಿಸಿಕೊಂಡ ತನ್ನ ಬೇರನ್ನು ಗಟ್ಟಿಗೊಳಿಸಿಕೊಳ್ಳುತ್ತಾ ಕಾದು ನೋಡಬೇಕು.

ಹಿರಿಯೂರು ವಿಧಾನನಸಭೆ ಕ್ಷೇತ್ರದಲ್ಲಿ ಕಳೆದ ಮೂರು ವಿಧಾನಸಭೆ ಹಾಗೂ ಎರಡು ಲೋಕಾ ಚುನಾವಣೆಗಳ ಫಲಿತಾಂಶದಲ್ಲಿನ ಏರಿಳಿತ ವಿಶೇಷವಾಗಿ ಗಮನಸೆಳೆಯುತ್ತಿದೆ.

2013ರ ವಿ'ನಸ' ಚುನಾವಣೆಯಲ್ಲಿ ಕಾಂಗ್ರೆಸ್‌ನ ಡಿ.ಸು'ಕರ್ 71,661 ಮತ ಪಡೆದರೆ ನಂತರ 2014 ರ ಲೋಕಾ ಚುನಾವಣೆಯಲ್ಲಿ ಬಿ.ಎನ್.ಚಂದ್ರಪ್ಪ 56,337 ಮತ ಪಡೆದಿದ್ದಾರೆ. ಜೆಡಿಎಸ್‌ನ ಎ.ಕೃಷ್ಣಪ್ಪ 70,456 ಮತ ಪಡೆದರೆ, ಲೋಕಾ ಚುನಾವಣೆಯಲ್ಲಿ ಜೆಡಿಎಸ್ ಅಭ್ಯರ್ಥಿಯಾಗಿದ್ದ ಗೂಳಿಹಟ್ಟಿ ಶೇಖರ್ 35,879 ಮತ ಪಡೆದಿದ್ದಾರೆ. ಬಿಜೆಪಿಯ ಸಿದ್ದೇಶ್ ಕೇವಲ 2888 ಮತ ಪಡೆದರೆ, ಲೋಕಾ ಚುನಾವಣೆಯಲ್ಲಿ ಬಿಜೆಪಿ ಅ'ರ್ಥಿಯಾಗಿದ್ದ ಜನಾರ್ಧನಸ್ವಾಮಿ ಅಚ್ಚರಿಯ ರೀತಿಯಲ್ಲಿ 34,945 ಮತ ಪಡೆದಿದ್ದಾರೆ.

2018 ರ ವಿಧಾನ ಸಭಾ' ಚುನಾವಣೆಯಲ್ಲಿ ಬಿಜೆಪಿ ಪೂರ್ಣಿಮಾ ಶ್ರೀನಿವಾಸ್ 77,733 ಮತ ಪಡೆದರೆ, ನಂತರ 2019 ರ ಲೋಕಾ ಚುನಾವಣೆಯಲ್ಲಿ ಬಿಜೆಪಿಯ ಎ.ನಾರಾಯಣಸ್ವಾಮಿ 77,071 ಮತ ಪಡೆದಿದ್ದಾರೆ. ಕಾಂಗ್ರೆಸ್‌ನ ಡಿ.ಸುಧಾಕರ್ 64,858 ಮತಗಳು, ಜೆಡಿಎಸ್‌ನ ಡಿ.ಯಶೋಧರ 42,044 ಮತಗಳನ್ನು ಪಡೆದರೆ ನಂತರ ಲೋಕಾ ಚುನಾವಣೆಯಲ್ಲಿ ಕಾಂಗ್ರೆಸ್, ಜೆಡಿಎಸ್ ಮೈತ್ರಿ ಅಭ್ಯರ್ಥಿ ಯಾಗಿದ್ದ ಬಿ.ಎನ್. ಚಂದ್ರಪ್ಪ 73,071 ಮತ ಪಡೆದಿದ್ದಾರೆ. ಜೆಡಿಎಸ್ ಮೈತ್ರಿಯ ಫಲ ಕಾಂಗ್ರೆಸ್‌ಗೆ ದೊರೆತಿಲ್ಲ ಎಂಬುದು ಮತ ಲೆಕ್ಕಚಾರದಲ್ಲಿ ಸ್ಪಷ್ಟವಾಗಿ ಕಾಣುತ್ತಿದೆ.







2023

ಈ ಬಾರಿಯ ಲೊಕ ಅಖಾಡದಲ್ಲಿ ಹಿರಿಯೂರಲ್ಲಿ ಸಾಂಪ್ರದಾಯಿಕ ಎದುರಾಳಿಗಳಾಗಿರುವ ಡಿ.ಸುಧಾಕರ್, ಕಾಂಗ್ರೆಸ್ ಮನೆ ಸೇರಿರುವ ಪೂರ್ಣಿಮಾ ಶ್ರೀನಿವಾಸ್ ಇಬ್ಬರ ಶಕ್ತಿಯನ್ನೂ ತೋರ್ಪಡಿಸುವ ಸವಾಲು ಎದುರಾಗಿದೆ. ಬಿಜೆಪಿ ತನಗಿರುವ ಮತದಾರರ ನೆಲೆ ಹಾಗೂ ಮೋದಿ ಮತದಾರರು ಮತ್ತು , ಜೆಡಿಎಸ್‌ನ ಮತದಾರರನ್ನು ಮೇಲೆ ಅವಲಂಬಿತವಾಗಿದ್ದು ಯಾರು ತಮ್ಮ ಶಕ್ತಿ ಸಾಬೀತು ಮಾಡುತ್ತಾರೆ ಎಂಬುದನ್ನು ನಾವು ಕಾದು ನೋಡಬೇಕಿದೆ.

**ಮತದಾರರ ವಿವರ**

| ಪುರುಷರು | ಮಹಿಳೆಯರು | ತೃತಿಯಲಿಂಗ | ಒಟ್ಟು ಮತದಾರರು |
|---|---|---|---|
| 1,22,532 | 1,25,406 | 16 | 2,47,954 |

**2023ರ ವಿಧಾನ ಸಭೆ ಚುನಾವಣೆ ಫಲಿತಾಂಶ**

| | | |
|---|---|---|
| ಡಿ.ಸುಧಾಕರ್ | ಕಾಂಗ್ರೆಸ್ | 92,050 |
| ಪೂರ್ಣಿಮಾ ಶ್ರೀನಿವಾಸ್ | ಬಿಜೆಪಿ | 61,235 |
| ಎಂ.ರವೀಂದ್ರಪ್ಪ | ಜೆಡಿಎಸ್ | 38,415 |



2019

**2019 ಲೋಕಸಭೆಯಲ್ಲಿ ಅಭ್ಯರ್ಥಿ ಪಡೆದ ಮತ**

| | | |
|---|---|---|
| ಬಿ.ಎನ್.ಚಂದ್ರಪ್ಪ | ಕಾಂಗ್ರೆಸ್ | 73,071ಮತ |
| ಎ.ನಾರಾಯಣಸ್ವಾಮಿ | ಬಿಜೆಪಿ | 77,017ಮತ |




2024

## ಫಾಸ್ಟ್ ನ್ಯೂಸ್

### 2ನೇ ಹಂತದ ಚುನಾವಣೆ ತರಬೇತಿ: ಮತಗಟ್ಟೆ ಸಿಬ್ಬಂದಿಗೆ ಬಸ್ ವ್ಯವಸ್ಥೆ

» ಚಿತ್ರದುರ್ಗ

ಲೋಕಸಭಾ ಸಾರ್ವತ್ರಿಕ ಚುನಾವಣೆ–2024ರ ಅಂಗವಾಗಿ ಇದೇ ಏಪ್ರಿಲ್ 20ರಂದು ಮತಗಟ್ಟೆ ಸಿಬ್ಬಂದಿಗೆ ಎರಡನೇ ಹಂತದ ಚುನಾವಣೆ ತರಬೇತಿ ಆಯೋಜಿಸಲಾಗಿದೆ. ಈ ತರಬೇತಿಗೆ ಒಂದು ತಾಲ್ಲೂಕು ಕೇಂದ್ರದಿಂದ, ಇನ್ನೊಂದು ತಾಲ್ಲೂಕು ಕೇಂದ್ರಕ್ಕೆ ತೆರಳುವ ಮತಗಟ್ಟೆ ಸಿಬ್ಬಂದಿಗೆ 71 ಕೆ.ಎಸ್.ಆರ್.ಟಿ.ಸಿ ಬಸ್‌ಗಳ ವ್ಯವಸ್ಥೆ ಮಾಡಲಾಗಿದೆ. ಚಿತ್ರದುರ್ಗ ನಗರದ ಪ್ರವಾಸಿ ಮಂದಿರದ ಎದುರಿನ ಹಳೇ ಮಾಧ್ಯಮಿಕ ಶಾಲಾ ಆವರಣ, ಚಳ್ಳಕೆರೆ ನಗರದ ಚಿತ್ರದುರ್ಗ ರಸ್ತೆಯಲ್ಲಿನ ಹೆಚ್.ಪಿ.ಪಿ.ಸಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಆವರಣ, ಹಿರಿಯೂರು ನಗರ ಹಾಗೂ ಹೊಳಲ್ಕೆರೆ ಪಟ್ಟಣದ ತಾಲ್ಲೂಕು ಕಚೇರಿ ಆವರಣ, ಮೊಳಕಾಲ್ಮೂರು ಪಟ್ಟಣದ ಸರ್ಕಾರಿ ಪದವಿ ಪೂರ್ವ ಕಾಲೇಜು ಹಾಗೂ ಹೊಸದುರ್ಗ ಪಟ್ಟಣದ ಶ್ರೀಮತಿ ತಾಯಮ್ಮ ಎಡೆತೊರೆ ಸಿದ್ದಿವಾಲ್ ಲಿಂಗಯ್ಯ ಪದವಿ ಪೂರ್ವ ಕಾಲೇಜು ಆವರಣದಿಂದ ತರಬೇತಿಗೆ ವಾಹನಗಳು ಮುಂಜಾನೆ 6 ಗಂಟೆಯಿಂದಲೇ ಹೊರಡಲಿವೆ. ತರಬೇತಿ ಪ್ರಕ್ರಿಯೆ ಮುಗಿದ ನಂತರ ಮರಳಿ ಸ್ವ ಸ್ಥಾನಕ್ಕೆ ವಾಪಸ್ ಕಳುಹಿಸುವ ವ್ಯವಸ್ಥೆ ಮಾಡಲಾಗಿದೆ. ತರಬೇತಿಗೆ ಹೊರಡುವ ಬಸ್‌ಗಳ ಮಾರ್ಗ ಹಾಗೂ ನಾಮಫಲಕಗಳ ನಿರ್ವಹಣೆಗಾಗಿ ಚಿತ್ರದುರ್ಗ ತಾಲ್ಲೂಕಿಗೆ ಸಂಬಂಧಿಸಿದಂತೆ ಹಿರಿಯ ಮೋಟಾರು ವಾಹನ ನಿರೀಕ್ಷಕ ಪಿ.ಎಂ.ಶಾನುಬೋಗ್ (ಮೊ:9972594412) ಹಾಗೂ ವಾಹನ ನಿರೀಕ್ಷಕ ರಾಜೇಶ್ (ಮೊ:9980323230), ಹಿರಿಯೂರು ತಾಲ್ಲೂಕಿಗೆ ಸಂಬಂಧಿಸಿದಂತೆ ಹಿರಿಯ ಮೋಟಾರು ವಾಹನ ನಿರೀಕ್ಷಕ ಮಹಂತೇಶ್ (ಮೊ:7483627424), ಹೊಸದುರ್ಗ ಮತ್ತು ಹೊಳಲ್ಕೆರೆ ತಾಲ್ಲೂಕಿಗೆ ಸಂಬಂಧಿಸಿದಂತೆ ಮೋಟಾರು ವಾಹನ ನಿರೀಕ್ಷಕ ಟಿ.ಎಂ.ಪ್ರಕಾಶ್ (ಮೊ:8217330331), ಚಳ್ಳಕೆರೆ ಮತ್ತು ಮೊಳಕಾಲ್ಮೂರು ತಾಲ್ಲೂಕಿಗೆ ಸಂಬಂಧಿಸಿದಂತೆ ಮೋಟಾರು ವಾಹನ ನಿರೀಕ್ಷಕ ಹೆಚ್.ಬಿ.ನದಾಫ್ (ಮೊ:9535554705) ಅವರನ್ನು ನೇಮಿಸಲಾಗಿದೆ. ಕೆ.ಎಸ್.ಆರ್.ಟಿ.ಸಿ ಬಸ್‌ಗಳ ನಿಯೋಜನೆಯಲ್ಲಿ ಯಾವುದೇ ತೊಂದರೆ ಉಂಟಾಗದಂತೆ ಕರ್ತವ್ಯ ನಿರ್ವಹಿಸಲು ಚಿತ್ರದುರ್ಗ ವಿಭಾಗೀಯ ಸಂಚಲನಾಧಿಕಾರಿ ಜಿ.ಸುರೇಶ್ (ಮೊ:9606908962) ನಿಯೋಜಿಸಲಾಗಿದೆ. ತರಬೇತಿಗೆ ನಿಯೋಜಿಸಲಾದ ಎಲ್ಲಾ ಇಲಾಖೆಗಳ ಸಿಬ್ಬಂದಿ ತಪ್ಪದೇ ಸರಿಯಾದ ಸಮಯಕ್ಕೆ ಚುನಾವಣಾ ತರಬೇತಿ ಕಾರ್ಯಕ್ಕೆ ಹಾಜರಾಗಬೇಕು ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಟಿ.ವೆಂಕಟೇಶ್ ತಿಳಿಸಿದ್ದಾರೆ.

### ಏ.21ರಂದು ಭಗವಾನ್ ಮಹಾವೀರ್ ಜಯಂತಿ



» ಚಿತ್ರದುರ್ಗ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ನಗರಸಭೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಇದೇ ಏಪ್ರಿಲ್ 21ರಂದು ಬೆಳಿಗ್ಗೆ 11 ಗಂಟೆಗೆ ಚಿತ್ರದುರ್ಗ ನಗರದ ತರಾಸು ರಂಗಮಂದಿರದ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಭಗವಾನ್ ಮಹಾವೀರ್ ಜಯಂತಿ ಆಯೋಜಿಸಲಾಗಿದೆ.ಲೋಕಸಭಾ ಚುನಾವಣಾ ನೀತಿ ಸಂಹಿತೆ ಜಾರಿ ಇರುವ ಹಿನ್ನೆಲೆಯಲ್ಲಿ ಭಗವಾನ್ ಮಹಾವೀರ ಜಯಂತಿಯನ್ನು ಸರಳವಾಗಿ ಮಹಾವೀರರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಆಚರಿಸಲಾಗುವುದು,

**ಪ್ರಮುಖ ಸುದ್ದಿ**

### ಹತ್ತತ್ತು ವರ್ಷ ಪ್ರಧಾನಿ ಆಗಿ ರೈತರಿಗೆ, ಕಾರ್ಮಿಕರಿಗೆ, ಯವ ಸಮೂಹಕ್ಕೆಒಂದೇ ಒಂದು ಕಾರ್ಯಕ್ರಮವನ್ನೂ ಕೊಡಲಾಗಲಿಲ್ಲವಲ್ಲ ಏಕೆ?

# ದೇಶದ ಆರ್ಥಿಕತೆ ಕುಸಿತ ಮೋದಿಯವರ ಸಾಧನೆ: ಸಿಎಂ

» ದೊಡ್ಡಬಳ್ಳಾಪುರ

ಬೆಲೆ ಏರಿಕೆ, ರೂಪಾಯಿ ಮೌಲ್ಯ ಕುಸಿತ, ರೈತರ ಆದಾಯ ಕುಸಿತ, ನಿರುದ್ಯೋಗ ಹೆಚ್ಚಳ, ದೇಶದ ಆರ್ಥಿಕತೆ ಕುಸಿತ ಮೋದಿಯವರ ಸಾಧನೆ. ಈ ಚಂದಕ್ಕೆ ಇವರು ಪ್ರಧಾನಿ ಆಗ್ಬೇಕಾ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಶ್ನಿಸಿದರು.

ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಅಭ್ಯರ್ಥಿ ರಕ್ಷಾ ರಾಮಯ್ಯ ಪರವಾಗಿ ದೊಡ್ಡಬಳ್ಳಾಪುರದಲ್ಲಿ ರೋಡ್ ಶೋ ನಡೆಸಿ ಮಾತನಾಡಿದರು.

ಹತ್ತತ್ತು ವರ್ಷ ಪ್ರಧಾನಿ ಆಗಿ ರೈತರಿಗೆ, ಕಾರ್ಮಿಕರಿಗೆ, ಯುವ ಸಮೂಹಕ್ಕೆ, ಮಹಿಳೆಯರಿಗೆ, ದುಡಿಯುವ ವರ್ಗಗಳಿಗೆ,



ಕೃಷಿ ಕಾರ್ಮಿಕರಿಗೆ, ಮಧ್ಯಮ ವರ್ಗದವರಿಗೆ, ಸಣ್ಣ ಮತ್ತು ಮಧ್ಯಮ ವರ್ಗದ ಉದ್ಯಮಿಗಳಿಗೆ ಒಂದೇ ಒಂದು ಕಾರ್ಯಕ್ರಮವನ್ನೂ ಕೊಡಲಾಗಲಿಲ್ಲವಲ್ಲ ಏಕೆ. ಮತೆ ನೀವು ಪ್ರಧಾನಿ ಆಗಿ ಭಾರತೀಯರಿಗೆ , ದೇಶಕ್ಕೆ ಸಿಕ್ಕಿದ್ದಾದರೂ ಏನು ಎಂದು ಪ್ರಶ್ನಿಸಿದರು.

ವಿದೇಶದಿಂದ ಕಪ್ಪು ಹಣ ತರುವುದಾಗಿ ಹೇಳಿದ್ರಿ ತರಲಿಲ್ಲ. ವರ್ಷಕ್ಕೆ 2 ಕೋಟಿ ಉದ್ಯೋಗ ಸೃಷ್ಟಿಸುವುದಾಗಿ ಹೇಳಿದ್ರಿ, ಹೊಸ ಉದ್ಯೋಗ ಸೃಷ್ಟಿಯಾಗುವುದಿರಲಿ ಇರುವ ಉದ್ಯೋಗಗಳೇ ನಷ್ಟ ಆದವು. ರೈತರ ಆದಾಯ ದುಪ್ಪಟ್ಟು ಮಾಡುವುದಾಗಿ ಹೇಳಿದಿರಿ, ಆದರೆ ರೈತರ ಖರ್ಚು ಮೂರು ಪಟ್ಟು ಆಗಿದೆ, ಡಾಲರ್ ಎದುರು ರೂಪಾಯಿ ಮೌಲ್ಯ ಹೆಚ್ಚುವುದಾಗಿ ಹೇಳಿದ್ರಿ, ಆದರೆ ರೂಪಾಯಿ ಮೌಲ್ಯ ಹೆಚ್ಚಾಗಲೇ ಇಲ್ಲ ಎಂದು ಮೋದಿ ವೈಫಲ್ಯಗಳ ಸುದೀರ್ಘ ಪಟ್ಟಿಯನ್ನೇ ಪ್ರಸ್ತಾಪಿಸಿದರು.

ಬಿಜೆಪಿಯಾಗಲೀ, ಮೋದಿಯವರಾಗಲೀ ಕೊಟ್ಟ ಮಾತಲ್ಲಿ ಒಂದನ್ನೂ ಈಡೇರಿಸಲಿಲ್ಲ. ಬದಲಿಗೆ ಹೇಳಿದ್ದಕ್ಕೆ ಉಲ್ಟಾ ಅನಾಹುತಗಳನ್ನೇ ಮಾಡಿದ್ದಾರೆ ಎಂದರು.

**ಕೋವಿಡ್ ಭ್ರಷ್ಟಾಚಾರಿಗೆ ತಕ್ಕ ಶಾಸ್ತಿ:** ಕೊರೋನಾ ಸಂದರ್ಭದಲ್ಲೂ ಕೋಟಿ ಕೋಟಿ ಕೊಳ್ಳೆ ಹೊಡೆದವರನ್ನು ಕ್ಷಮಿಸಲು ಸಾಧ್ಯವೇ? ಕೋವಿಡ್ ಹಗರಣದ ತನಿಖೆ ನಡೆಯುತ್ತಿದೆ. ಹಗರಣ ನಡೆದಿರುವುದಕ್ಕೆ ಸಾಕಷ್ಟು ಸಾಕ್ಷ್ಯಗಳಿರುವ ಬಗ್ಗೆ ನನಗೆ ಮಾಹಿತಿ ಇದೆ. ತನಿಖೆ ಪೂರ್ಣಗೊಂಡ ಬಳಿಕ ಭ್ರಷ್ಟಾಚಾರಿಕೆ ತಕ್ಕ ಶಾಸ್ತಿ ಆಗುತ್ತದೆ. ಆದ್ದರಿಂದ ಬಿಜೆಪಿ ಅಭ್ಯರ್ಥಿ ಸುಧಾಕರ್ ಅವರನ್ನು ಸೋಲಿಸಿ ಕನ್ನಡ ನಾಡಿನ ಪರವಾಗಿ ಧ್ವನಿ ಎತ್ತುವ ರಕ್ಷಾ ರಾಮಯ್ಯರನ್ನು ಗೆಲ್ಲಿಸಿಕೊಂಡು ಬನ್ನಿ. ರಕ್ಷಾ ರಾಮಯ್ಯ ನೂರಕ್ಕೆ ನೂರು ಗೆಲ್ತಾರೆ ಎಂದು ಭರವಸೆ ವ್ಯಕ್ತಪಡಿಸಿದರು.

## ಫಾಸ್ಟ್ ನ್ಯೂಸ್

### 19ರಂದು ಮತದಾನ ಜಾಗೃತಿಗಾಗಿ ಮ್ಯಾರಥಾನ್ ಓಟದ ಸ್ಪರ್ಧೆ

» ಚಿತ್ರದುರ್ಗ

ಜಿಲ್ಲಾಡಳಿತ, ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಇದೇ ಏಪ್ರಿಲ್ 19ರಂದು ಬೆಳಿಗ್ಗೆ 6.30ಕ್ಕೆ ಚಿತ್ರದುರ್ಗ ನಗರದ ಒನಕೆ ಓಬವ್ವ ಕ್ರೀಡಾಂಗಣದಲ್ಲಿ ಲೋಕಸಭಾ ಸಾರ್ವತ್ರಿಕ ಚುನಾವಣೆ ಹಿನ್ನಲೆಯಲ್ಲಿ ಮತದಾನ ಜಾಗೃತಿ ಮೂಡಿಸುವ ಸಲುವಾಗಿ ಮ್ಯಾರಥಾನ್ ಓಟದ ಸ್ಪರ್ಧೆ ಆಯೋಜಿಸಲಾಗಿದೆ. ಮತದಾನ ಜಾಗೃತಿ ಮೂಡಿಸುವ ಸಲುವಾಗಿ ಮ್ಯಾರಥಾನ್ ಓಟದ ಸ್ಪರ್ಧೆಯನ್ನು ಪುರುಷ ಹಾಗೂ ಮಹಿಳೆಯರಿಗಾಗಿ ಹಮ್ಮಿಕೊಳ್ಳಲಾಗಿದ್ದು, ಸ್ಪರ್ಧೆಯಲ್ಲಿ ವಿಜೇತರಾದ ಪ್ರಥಮ 6 ಸ್ಥಾನಗಳಿಗೆ ಬಹುಮಾನ ನೀಡಲಾಗುವುದು. ಸ್ಪರ್ಧೆಯಲ್ಲಿ ಕ್ರೀಡಾಪಟುಗಳು ಜಿಲ್ಲೆಯ ಕ್ರೀಡಾಪಟುಗಳು, ಯುವಕ-ಯುವತಿಯರು, ಸ್ವಯಂ ಸೇವಾ ಸಂಸ್ಥೆಯ ಹಾಗೂ ವಿವಿಧ ಸಂಘಟನೆಗಳು ಮತದಾನದ ಜಾಗೃತಿಯಲ್ಲಿ ಭಾಗವಹಿಸಲು ಕೋರಿದೆ. ಮ್ಯಾರಥಾನ್ ಓಟದ ಸ್ಪರ್ಧೆಯು ಚಿತ್ರದುರ್ಗ ನಗರದ ಒನಕೆ ಓಬವ್ವ ಕ್ರೀಡಾಂಗಣದಿಂದ ಪ್ರಾರಂಭವಾಗಿ ಪಾರ್ಕ್ ರೋಡ್, ಜೋಗಿಮಟ್ಟಿ ರಸ್ತೆ, ರಂಗಯ್ಯನಬಾಗಿಲು, ಉಚ್ಚಂಗಿ ಯಲ್ಲಮ್ಮ ದೇವಸ್ಥಾನ, ಆನೆ ಬಾಗಿಲು, ಮಹಾತ್ಮ ಗಾಂಧಿ ವೃತ್ತ, ಬಿ.ಡಿ. ವೃತ್ತ, ಪ್ರವಾಸಿ ಮಂದಿರ ಮಾರ್ಗವಾಗಿ ಮದಕರಿ ವೃತ್ತ, ಎಲ್ಐಸಿ ಮುಂಭಾಗ, ಸ್ಟೇಡಿಯಂ ರಸ್ತೆ ಮೂಲಕ ಪುನಃ ಒನಕೆ ಓಬವ್ವ ಕ್ರೀಡಾಂಗಣದಲ್ಲಿ ಮುಕ್ತಾಯವಾಗಲಿದೆ ಎಂದು ಜಿಲ್ಲಾ ಸ್ವೀಪ್ ಸಮಿತಿ ಜಿಲ್ಲಾ ಸಂಯೋಜಕಿ ಸುಷ್ಮಾ ರಾಣಿ ತಿಳಿಸಿದ್ದಾರೆ.

### ಏ.23ರಂದು ಅಬ್ಬಿನಹೊಳೆ ಶ್ರೀ ರಂಗನಾಥಸ್ವಾಮಿಯ ಬ್ರಹ್ಮರಥೋತ್ಸವ

» ಚಿತ್ರದುರ್ಗ

ಜಿಲ್ಲೆಯ ಹಿರಿಯೂರು ತಾಲ್ಲೂಕಿನ ಅಬ್ಬಿನಹೊಳೆ ಗ್ರಾಮದ ಶ್ರೀ ರಂಗನಾಥ ಸ್ವಾಮಿ ಬ್ರಹ್ಮ ರಥೋತ್ಸವ ಇದೇ ಏಪ್ರಿಲ್ 23ರಂದು ನಡೆಯಲಿದೆ.

ಶ್ರೀ ರಂಗನಾಥ ಸ್ವಾಮಿಯ ಜಾತ್ರಾ ಮಹೋತ್ಸವದ ಅಂಗವಾಗಿ ಈಗಾಗಲೇ ಏಪ್ರಿಲ್ 11 ರಿಂದ ಧ್ವಜಾರೋಹಣಹಾಗೂಶ್ರೀಸ್ವಾಮಿಗಂಗಾಪೂಜೆಯ ಧಾರ್ಮಿಕ ಕಾರ್ಯ ಪ್ರಾರಂಭವಾಗಿದ್ದು, ಏಪ್ರಿಲ್ 19ರಂದು ಅಂಕುರಾರ್ಪಣದ ಕಳಸ ಸ್ಥಾಪನೆ, ಹೋಮ ಧ್ವಜಾರೋಹಣ, ಅಗ್ನಿ, ಪ್ರತಿಷ್ಠೆ, ಮೂರ್ತಿ ಹೋಮಾದಿ ಕಾರ್ಯಕ್ರಮ, ಅಂದು ರಾತ್ರಿ ಹನ್ಮಂತ ಮಹೋತ್ಸವ ಜರುಗಲಿದೆ. ಏ.20ರಂದು ಧ್ವಜಾರೋಹಣ, ಮೂರ್ತಿ ಹೋಮಾದಿ ಕಾರ್ಯಕ್ರಮಗಳು, ಅಂದು ರಾತ್ರಿ ಸಿಂಹ ವಾಮನೋತ್ಸವ ಕಾರ್ಯಕ್ರಮ ಜರುಗಲಿದೆ.

ಏ.21 ರಂದು ರಾತ್ರಿ ಗರುಡೋತ್ಸವ, ಬೆಳಗಿನ ಜಾವ 4 ಗಂಟೆಯಿಂದ 6 ರವರೆಗೆ ವೃಷಭ ಲಗ್ನದಲ್ಲಿ ಕಲ್ಯಾಣೋತ್ಸವ, ಏ.22ರಂದು ಗಜೇಂದ್ರ ಮೋಕ್ಷ, ಏ.23ರಂದು ಮೂರ್ತಿ ಹೋಮಾದಿ ಕಾರ್ಯಗಳು ಹಾಗೂ ಮಧ್ಯಾಹ್ನ 12 ರಿಂದ 1.30 ರವರೆಗೆ ಶ್ರೀ ರಂಗನಾಥ ಸ್ವಾಮಿ ಬ್ರಹ್ಮರಥೋತ್ಸವ ಜರುಗಲಿದೆ. ಏ.24 ರಂದು ಮೂರ್ತಿ ಹೋಮಾದಿ ಕಾರ್ಯಗಳು, ಜಲ ಕ್ರೀಡೋತ್ಸವ, ಮೃಗ ಯಾತ್ರೋತ್ಸವ, ಏ.25 ರಂದು ಮೂರ್ತಿ ಹೋಮಾದಿ ಕಾರ್ಯ, ವಸಂತೋತ್ಸವ ಕಾರ್ಯ, ಧ್ವಜಾರೋಹಣ ಕಾರ್ಯ, ಕಂಕಣ ವಿಸರ್ಜನೆ ಹಾಗೂ ಪೂರ್ಣಾಹುತಿ 101 ಮಂಗಳಾರತಿ ಕಾರ್ಯ ನಡೆಯಲಿದೆ. ಏ.26ರಂದು ಶುಕ್ರವಾರ ಕೊನೆಯ ದಿನದಂದು ಸಂಜೆ 6 ಗಂಟೆಗೆ ಅಬ್ಬಿನಹೊಳೆ ಶ್ರೀ ಕಣಿವೆಮಾರಮ್ಮ ದೇವಿಗೆ ಸುಮಂಗಲೆಯರಿಂದ ಅಕ್ಕಿ ತಬ್ಬಿಟ್ಟಿನ ಆರತಿ ಕಾರ್ಯ ನಡೆಯಲಿದೆ. ಜಾತ್ರಾ ಮಹೋತ್ಸವದ ಪ್ರಯುಕ್ತ ಮೂರು ದಿನಗಳ ಕಾಲ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ.

27ನೇ ವಾರ್ಷಿಕ ಮಹಾಸಭೆ: ಹಿರಿಯೂರು ತಾಲ್ಲೂಕು ಅಬ್ಬಿನಹೊಳೆ ಶ್ರೀ ರಂಗನಾಥಸ್ವಾಮಿ ದೇವಸ್ಥಾನ ಕ್ಷೇತ್ರಾಭಿವೃದ್ಧಿ ಸಮಿತಿ ಟ್ರಸ್ಟ್ ಸಂಘದ ಸರ್ವ ಸದಸ್ಯರ 27ನೇ ವಾರ್ಷಿಕ ಮಹಾಸಭೆಯು ಇದೇ ಏಪ್ರಿಲ್ 23ರಂದು ಬೆಳಿಗ್ಗೆ 11ಕ್ಕೆ ದೇವಸ್ಥಾನದ ಆವರಣದಲ್ಲಿ ಜರುಗಲಿದೆ. ಸಂಘದ ಅಧ್ಯಕ್ಷ ಟಿ.ಪುಟ್ಟಾಚಾರ್ ಅಧ್ಯಕ್ಷತೆಯಲ್ಲಿ ಸಭೆ ನಡೆಯಲಿದೆ ಎಂದು ಪ್ರಕಟಣೆ ತಿಳಿಸಿದೆ.

### ಲೋಕಸಭಾ ಚುನಾವಣೆ 10 ನಾಮಪತ್ರಗಳ ಸಲ್ಲಿಕೆ

» ದಾವಣಗೆರೆ

ದಾವಣಗೆರೆ ಲೋಕಸಭಾ ಕ್ಷೇತ್ರಕ್ಕೆ ಮೇ 7 ರಂದು ಮತದಾನ ನಡೆಯಲಿದ್ದು ನಾಮಪತ್ರ ಸಲ್ಲಿಕೆಗೆ ಐದನೇ ದಿನವಾದ ಏಪ್ರಿಲ್ 18 ರಂದು 10 ಅಭ್ಯರ್ಥಿಗಳಿಂದ 10 ನಾಮಪತ್ರಗಳು ಸಲ್ಲಿಕೆಯಾಗಿವೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಡಾ: ವೆಂಕಟೇಶ್ ಎಂ.ವಿ ತಿಳಿಸಿದ್ದಾರೆ. ನಾಮಪತ್ರ ಸಲ್ಲಿಸಿದವರ ವಿವರ; ಕೆಆರ್ಎಸ್ ಪಕ್ಷದಿಂದ ರಘವೇಂದ್ರ ಜಿ.ಪಿ ಉಳಿದಂತೆ ಎಲ್ಲಾ ಪಕ್ಷೇತರರಾಗಿದ್ದು ರವಿನಾಯಕ, ತಸ್ಲಿಮ್ ಭಾನು, ಪರ್ವೇಜ್, ಎಂ.ರಂಗನಾಥಸ್ವಾಮಿ, ರಶೀದ್ ಖಾನ್, ಸಲೀಂ, ಮಂಜುನಾಥ ಎ.ಕೆ, ಅಲ್ಲಾ ಭಕ್ಷಿ.ಬಿ, ಅಬ್ದುಲ್ ನಜೀರ್ ಸಾಬ್ ನಾಮಪತ್ರ ಸಲ್ಲಿಸಿದವರು. ಇದುವರೆಗೆ ಒಟ್ಟು 29 ಅಭ್ಯರ್ಥಿಗಳಿಂದ 34 ನಾಮಪತ್ರಗಳು ಸಲ್ಲಿಕೆಯಾಗಿದೆ. ಏ.12 ರಂದು ಐದು ಅಭ್ಯರ್ಥಿಗಳಿಂದ 6 ನಾಮಪತ್ರಗಳು, ಏ.15 ರಂದು 8 ಅಭ್ಯರ್ಥಿಗಳಿಂದ 9 ನಾಮಪತ್ರಗಳು ಹಾಗೂ ಏ.16 ರಂದು 3 ಅಭ್ಯರ್ಥಿಗಳಿಂದ 3 ನಾಮಪತ್ರಗಳು, ಏ.17 ರಂದು 6 ಅಭ್ಯರ್ಥಿಗಳಿಂದ 6 ನಾಮಪತ್ರ, ಏ.18 ರಂದು 10 ಅಭ್ಯರ್ಥಿಗಳಿಂದ 10 ನಾಮಪತ್ರಗಳು ಸಲ್ಲಿಕೆಯಾಗಿವೆ.

# 24ಕ್ಕೆ ಕೋಟೆನಾಡಲ್ಲಿ ಯೋಗಿ ಮತಬೇಟೆ



» ಚಿತ್ರದುರ್ಗ

ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಬಿಜೆಪಿ. ಅಭ್ಯರ್ಥಿ ಪರ ಬಹಿರಂಗ ಪ್ರಚಾರಕ್ಕೆ ಇದೇ ತಿಂಗಳ 24 ರಂದು ಚಿತ್ರದುರ್ಗಕ್ಕೆ ಉತ್ತರಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಆಗಮಿಸಲಿದ್ದು, ಬೃಹತ್ ರೋಡ್‌ಶೋ ನಡೆಸಲಾಗುವುದೆಂದು ವಿಧಾನಪರಿಷತ್ ಸದಸ್ಯ ಎನ್. ರವಿಕುಮಾರ್ ತಿಳಿಸಿದರು.

ಪತ್ರಕರ್ತರ ಭವನದಲ್ಲಿ ಗುರುವಾರ ಸುದ್ದಿಗೋಷ್ಟಿಯಲ್ಲಿ ಮಾತನಾಡಿದ ಅವರು 19, 20, 21 ರಂದು ಚಿತ್ರದುರ್ಗದ 35 ವಾರ್ಡ್‌ಗಳಲ್ಲಿಯೂ ಮನೆ ಮನೆಗೆ ಅಭಿಯಾನ ಹಮ್ಮಿಕೊಂಡಿದ್ದು, ಬಿಜೆಪಿ. ಅಭ್ಯರ್ಥಿ ಗೋವಿಂದ ಕಾರಜೋಳರವರ ಪರ ಮತಯಾಚಿಸಲಾಗುವುದು. 2167 ಬೂತ್‌ಗಳಿಗೂ ಅಭಿಯಾನ ಸಂಪರ್ಕಿಸಲಿದ್ದು, 21 ರಂದು ರಾತ್ರಿ ಎಂಟು ಗಂಟೆಯೊಳಗಾಗಿ ಶೇ. 96 ರಷ್ಟು ಮತದಾರರನ್ನು ತಲುಪುವ ಗುರಿಯಿಟ್ಟುಕೊಂಡಿದ್ದೇವೆಂದು ಹೇಳಿದರು.

ಚಿತ್ರದುರ್ಗ ಲೋಕಸಭಾ ಕ್ಷೇತ್ರ ವ್ಯಾಪ್ತಿಯ ಎಂಟು ವಿಧಾನಸಭೆ ಕ್ಷೇತ್ರ ಹಾಗೂ ನಗರದ 35 ವಾರ್ಡ್‌ಗಳಲ್ಲಿ ಅಭಿಯಾನ ಸಂಚರಿಸಲು ತಯಾರಿ ನಡೆಸುತ್ತಿದ್ದು, ಗೋವಿಂದ ಕಾರಜೋಳರನ್ನು ಎರಡು ಲಕ್ಷ ಮತಗಳ ಅಂತರದಿಂದ ಗೆಲ್ಲಿಸಲಾಗುವುದು. ಈ ಚುನಾವಣೆಯಲ್ಲಿ ಕಾಂಗ್ರೆಸ್‌ಗೆ ನಲವತ್ತು ಸೀಟುಗಳನ್ನು ಗೆಲ್ಲುವುದು ಕಷ್ಟ. ದೇಶದೆಲ್ಲೆಡೆ ಮೋದಿ ಅಲೆ ಇರುವುದರಿಂದ ಈ ಚುನಾವಣೆಯಲ್ಲಿ ಗೆಲ್ಲುವ ಗೋವಿಂದ ಕಾರಜೋಳರವರು ಕೇಂದ್ರ ಮಂತ್ರಿಯಾಗುವುದು ಖಚಿತ. ಕಾಂಗ್ರೆಸ್‌ಗೆ ಪಾರ್ಲಿಮೆಂಟ್‌ನಲ್ಲಿ ವಿರೋಧ ಪಕ್ಷದ ಸ್ಥಾನಮಾನ ಸಿಗುವುದು ಕಷ್ಟ ಎಂದರು.

ಜೆಡಿಎಸ್.ರಾಜ್ಯ ಪ್ರಧಾನ ಕಾರ್ಯದರ್ಶಿ ಬಿ.ಕಾಂತರಾಜ್ ಮಾತನಾಡಿ ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಬಿಜೆಪಿ. ಅಭ್ಯರ್ಥಿ ಗೋವಿಂದ ಕಾರಜೋಳರವರ ಪರ ಮತಯಾಚಿಸಲು ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿರವರು ಶುಕ್ರವಾರ ಹಿರಿಯೂರು ಹಾಗೂ ಪರಶುರಾಂಪುರಕ್ಕೆ



ಆಗಮಿಸಲಿದ್ದಾರೆ. ಎರಡು ಪಕ್ಷಗಳು ಹೊಂದಾಣಿಕೆಮಾಡಿಕೊಂಡಿರುವುದರಿಂದ ಗೋವಿಂದ ಕಾರಜೋಳರವರ ಗೆಲುವು ಸುಲಭವಾಗಲಿದೆ ಎಂದರು.

ವಿಧಾನಪರಿಷತ್‌ಸದಸ್ಯಕೆ.ಎಸ್.ನವೀನ್, ನಗರಸಭೆ ಸದಸ್ಯರುಗಳಾದ ಶಶಿಧರ್, ಹರೀಶ್, ಭಾಸ್ಕರ್, ತಾರಕೇಶ್ವರಿ, ಮಂಜುಳ, ಮಾಜಿ ಅಧ್ಯಕ್ಷೆ ಹಾಲಿ ಸದಸ್ಯೆ ತಿಪ್ಪಮ್ಮ ವೆಂಕಟೇಶ್, ಅಭ್ಯರ್ಥಿ ಗೋವಿಂದ ಕಾರಜೋಳ ಪತ್ರಿಕಾಗೋಷ್ಠಿಯಲ್ಲಿದ್ದರು.

**ತಿಪ್ಪಾರೆಡ್ಡಿ ವಿರುದ್ಧ ಮುನಿಸಿಕೊಂಡಿದ್ದವರು ಬಿಜೆಪಿ. ಕಚೇರಿಯಲ್ಲಿ ಪ್ರತ್ಯಕ್ಷ:** ವಿಧಾನಸಭೆ ಚುನಾವಣೆಯಲ್ಲಿಬಿಜೆಪಿ.ಅಭ್ಯರ್ಥಿಜಿ.ಹೆಚ್. ತಿಪ್ಪಾರೆಡ್ಡಿ ವಿರುದ್ದ ಮುನಿಸಿಕೊಂಡು ಕಾಂಗ್ರೆಸ್‌ನ ಕೆ.ಸಿ.ವೀರೇಂದ್ರಪಪ್ಪಿ ಗೆಲುವಿಗೆ ಟೊಂಕ ಕಟ್ಟಿ ನಿಂತಿದ್ದ ಕೆಲವು ನಗರಸಭೆ ಸದಸ್ಯರುಗಳು ಗುರುವಾರ ಬಿಜೆಪಿ. ಕಚೇರಿಯಲ್ಲಿ ಪ್ರತ್ಯಕ್ಷವಾಗಿ ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಬಿಜೆಪಿ. ಅಭ್ಯರ್ಥಿ ಗೋವಿಂದ ಕಾರಜೋಳರವರಿಗೆ ಬೆಂಬಲ ಸೂಚಿಸಿದರು.

ವಿಧಾನಸಭಾ ಚುನಾವಣೆಯಲ್ಲಿ ಜಿ.ಹೆಚ್.ತಿಪ್ಪಾರೆಡ್ಡಿರವರನ್ನು ಶತಗತಾಯ ಸೋಲಿಸಬೇಕೆಂಬ ಹಠತೊಟ್ಟು ಕಾಂಗ್ರೆಸ್‌ನ ವೀರೇಂದ್ರಪಪ್ಪಿ ಕಡೆ ಹಾರಿದ್ದ ನಗರಸಭೆ ಅಧ್ಯಕ್ಷೆ ಶ್ರೀಮತಿ ತಿಪ್ಪಮ್ಮ, ಪತಿ ಸದಸ್ಯ ವೆಂಕಟೇಶ್, ಶಶಿಧರ್, ಭಾಸ್ಕರ್, ಮಂಜುಳ, ತಾರಕೇಶ್ವರಿ ಮಾಜಿ ಸದಸ್ಯ ಮಹೇಶ್ ಇವರುಗಳು ಬಿಜೆಪಿ. ಕಚೇರಿಗೆ ಆಗಮಿಸಿ ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಅಭ್ಯರ್ಥಿ ಗೋವಿಂದ ಕಾರಜೋಳರವರ ಪರ ನಿಲ್ಲುವುದಾಗಿ ಸಮ್ಮತಿಸಿದರು.

# ಭೋವಿ ಗುರುಪೀಠಕ್ಕೆ ಸಚಿವರ ನಿಯೋಗ ಭೇಟಿ



» ಚಿತ್ರದುರ್ಗ

ಸಚಿವ ಸಂತೋಷಲಾಡ್ ನೇತೃತ್ವದಲ್ಲಿ ಬಳ್ಳಾರಿಯ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ತುಕರಾಂ ಅವರು ಚಿತ್ರದುರ್ಗದ ಸಿದ್ದರಾಮೇಶ್ವರ ಮಹಾಸಂಸ್ಥಾನ ಭೋವಿ ಗುರುಪೀಠಕ್ಕೆ ಗುರುವಾರ ಭೇಟಿ ನೀಡಿ ಶ್ರೀಗಳ ಆಶೀರ್ವಾದ ಪಡೆದರು.ಸಚಿವರ ನಿಯೋಗವು ಭೋವಿ ಗುರುಪೀಠದ ಶ್ರೀ ಇಮ್ಮಡಿ ಸಿದ್ಧರಾಮೇಶ್ವರ ಸ್ವಾಮೀಜಿ, ಕುಂಚಿಟಿಗ ಗುರುಪೀಠದ ಶ್ರೀ ಶಾಂತವೀರ ಸ್ವಾಮೀಜಿ, ವಾಲ್ಮೀಕಿ ಗುರುಪೀಠದ ಶ್ರೀ ವಾಲ್ಮೀಕಿ ಪ್ರಸನ್ನಾನಂದ ಸ್ವಾಮೀಜಿ ಭಗೀರಥ ಗುರುಪೀಠದ ಶ್ರೀ ಪುರುಷೋತ್ತಮಾನಂದಪುರಿ ಸ್ವಾಮೀಜಿ, ಯಾದವ ಗುರುಪೀಠದ ಶ್ರೀ ಕೃಷ್ಣ ಯಾದವಾನಂದ ಸ್ವಾಮೀಜಿ, ಮಡಿವಾಳ ಗುರುಪೀಠದ ಶ್ರೀ ಬಸವ ಮಾಚಿದೇವ ಸ್ವಾಮೀಜಿ, ಈಡಿಗ ಗುರುಪೀಠದ ಶ್ರೀ ರೇಣುಕಾನಂದ ಸ್ವಾಮೀಜಿ, ಹಡಪದ ಗುರುಪೀಠದ ಶ್ರೀ ಅನ್ನದಾನಿ ಭಾರತಿ ಅಪ್ಪಣ್ಣ ಸ್ವಾಮೀಜಿ, ಕುಂಬಾರ ಗುರುಪೀಠದ ಶ್ರೀ ಬಸವ ಕುಂಬಾರ ಗುಂಡಯ್ಯ ಸ್ವಾಮೀಜಿ, ಶಿವಶಕ್ತಿ ಗುರುಪೀಠದ ಶ್ರೀ ಬಸವಪ್ರಸಾದ ಸ್ವಾಮೀಜಿ, ಪಾರಮಾರ್ಥಿಕ ಗವಿಮಠದ ಶ್ರೀ ಮಲ್ಲಿಕಾರ್ಜುನ ಸ್ವಾಮೀಜಿ , ಕೊರಟಗೆರೆ ಅನ್ನಪೂರ್ಣೇಶ್ವರಿ ಮಠದ ಶ್ರೀ ಬಸವ ಮಹಾಲಿಂಗ ಸ್ವಾಮೀಜಿ, ಬಸವಕಲ್ಯಾಣ ಶ್ರೀ ಸತ್ಯಕ್ಕ ತಾಯಿ, ಪೂಜ್ಯರ ಆಶೀರ್ವಾದ ಪಡೆದರು.ಈ ಸಂದರ್ಭದಲ್ಲಿ ಬಳ್ಳಾರಿ ಲೋಕಸಭಾ ಕ್ಷೇತ್ರದ ಸರ್ವಧರ್ಮಿಯರು ಉಪಸ್ಥಿತರಿದ್ದರು.

## ಜನಪರ ಅಭಿವೃದ್ಧಿಯೇ ನಮ್ಮ ಗ್ಯಾರಂಟಿ



» ಚಿತ್ರದರ್ಗ

ವಿಧಾನಸಭಾ ಕ್ಷೇತ್ರದ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅವರ ನೇತೃತ್ವದಲ್ಲಿ ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಬಿಎನ್.ಚಂದ್ರಪ್ಪ ಚಿತ್ರದರ್ಗ ನಗರದ ವ್ಯಾಪ್ತಿಯ 33 ಹಾಗೂ 34 ನೇ ವಾರ್ಡನಲ್ಲಿ ಚುನಾವಣಾ ಪ್ರಚಾರ ನಡೆಸಿ, ಹಸ್ತದ ಗುರುತಿಗೆ ಮತಯಾಚಿಸಿದರು. ಜನಪರ ಅಭಿವೃದ್ಧಿಯನ್ನು ಮೆಚ್ಚಿರುವ ಕ್ಷೇತ್ರದ ಜನರ ಒಲವು ಕಾಂಗ್ರೆಸ್ ಪರವಾಗಿದೆ. ಮತದಾರರ ಉತ್ಸಾಹ, ಪ್ರೋತ್ಸಾಹ ನಮ್ಮ ಗೆಲುವಿನ ಪ್ರತೀಕ ಎಂದರು. ಈ ಸಂದರ್ಭದಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಭಾಗವಹಿಸಿದ್ದರು.

# ಅಂಜುಂ ಪರ್ವೇಜ್ ಅವರಿಂದ ನರೇಗಾ ಕಾಮಗಾರಿ ವೀಕ್ಷಣೆ, ಕೂಲಿಕಾರರೊಂದಿಗೆ ಸಂವಾದ

» ಚಿತ್ರದುರ್ಗ

ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಅಂಜುಂ ಪರ್ವೇಜ್ ಅವರು ಚಿತ್ರದುರ್ಗ ಜಿಲ್ಲೆಯ ಹೊಸದುರ್ಗ ತಾಲ್ಲೂಕಿನ ಲಕ್ಕಿಹಳ್ಳಿ ಗ್ರಾಮ ಪಂಚಾಯಿತಿಗೆ ಗುರುವಾರ ಭೇಟಿ ನೀಡಿದರು.

ಲಕ್ಕಿಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವಂತಹ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಅನುಷ್ಠಾನವಾಗುತ್ತಿರುವ ಕೆರೆ ಹೂಳು ತೆಗೆಯುವ ಕಾಮಗಾರಿ ವೀಕ್ಷಣೆ ಮಾಡಿ, ಕೂಲಿಕಾರರೊಂದಿಗೆ ಸಂವಾದ ನಡೆಸಿದರು. ಇದೇ ವೇಳೆ ಲಕ್ಕಿಹಳ್ಳಿ ಗ್ರಾಮದ ಕಲ್ಯಾಣಿ ಅಭಿವೃದ್ಧಿ ಕಾಮಗಾರಿ ಹಾಗೂ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಕಾಮಗಾರಿಗಳನ್ನೂ ಸಹ ವೀಕ್ಷಣೆ ಮಾಡಿದರು.

ಈಸಂದರ್ಭದಲ್ಲಿಜಿಲ್ಲಾಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್, ಉಪಕಾರ್ಯದರ್ಶಿ ಟಿ.ತಿಮ್ಮಪ್ಪ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಕಾರ್ಯಪಾಲಕ ಅಭಿಯಂತರ ಬಸವನಗೌಡ ಪಾಟೀಲ್, ಹೊಸದುರ್ಗ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಸುನೀಲ್ ಕುಮಾರ್ ಸೇರಿದಂತೆ ಸಿಬ್ಬಂದಿ ವರ್ಗದವರು ಇದ್ದರು.



## ಪ್ರಮುಖ ಸುದ್ದಿ

# ಚಿತ್ರದುರ್ಗ ಅಭ್ಯರ್ಥಿ ಬಿ.ಎನ್.ಚಂದ್ರಪ್ಪ ಗೆಲುವು ನಿಶ್ಚಿತ





» ಚಳ್ಳಕೆರೆ

ಲೋಕಸಭಾ ಚುನಾವಣೆ ಮತದಾನ ನಡೆಯಲು ಇನ್ನೂ ಕೇವಲ ಎಂಟು ದಿನಗಳು ಮಾತ್ರ ಬಾಕಿ ಇದ್ದು, ಈ ಬಾರಿಯ ಚುನಾವಣೆಯಲ್ಲಿ ಅಭ್ಯರ್ಥಿ ಬಿ.ಎನ್. ಚಂದ್ರಪ್ಪ ಹೆಚ್ಚು ಮತಗಳಿಸಿ ಆಯ್ಕೆಯಾಗುವರು ಎಂಬ ವಿಶ್ವಾಸ ದಿನದಿಂದ ದಿನಕ್ಕೆ ಹೆಚ್ಚುತ್ತಿದೆ ಎಂದು ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ಅವರು, ಗುರುವಾರ ತಾಲ್ಲೂಕಿನ ಜಡೇಕುಂಟೆ, ಹುಲಿಕುಂಟೆ, ಕಾಪರಹಳ್ಳಿ ಮುಂತಾದ ಗ್ರಾಮಗಳಲ್ಲಿ ಅಭ್ಯರ್ಥಿ ಬಿ.ಎನ್.ಚಂದ್ರಪ್ಪಪರ ಮತಯಾಚನೆ ಮಾಡಿ ಮಾತನಾಡಿದರು. ಜಡೇಕುಂಟೆಯಲ್ಲಿ ಆಯೋಜಿಸಿದ್ದ ಸಭೆಯಲ್ಲಿ ಮಾತನಾಡಿದ ಅವರು, ಚುನಾವನೆ ದಿನಾಂಕ ಘೋಷಣೆಯಾಗಿ ಈಗಾಗಲೇ ಒಂದು ತಿಂಗಳು ಕಳೆದಿದೆ. ಈ ಹಂತದಲ್ಲಿ ಚಳ್ಳಕೆರೆ ವಿಧಾನಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಬೇರೆ, ಬೇರೆ ಪಕ್ಷದ ಮುಖಂಡರು ಸೇರ್ಪಡೆಯಾಗುವ ಮೂಲಕ ಪಕ್ಷದ ಶಕ್ತಿಯನ್ನು ಹೆಚ್ಚಿಸಿದ್ದಾರೆ. ಪಕ್ಷದ ಎಲ್ಲಾ ಹಂತದ ಮುಖಂಡರು ಹಾಗೂ ಕಾರ್ಯಕರ್ತರು ಚಂದ್ರಪ್ಪನವರ ಗೆಲುವಿಗೆ ಶಕ್ತಿಮೀರಿ ಶ್ರಮಿಸಬೇಕು ಎಂದರು. ಹಿರಿಯ ಮುಖಂಡ ಟಿ.ಪ್ರಭುದೇವ್ ಮಾತನಾಡಿ, ರಾಜ್ಯದಲ್ಲಿ ಆಡಳಿತ ನಡೆಸುತ್ತಿರುವ ಕಾಂಗ್ರೆಸ್ ಪಕ್ಷದ ನೇತೃತ್ವ ಸರ್ಕಾರ ಚುನಾವಣೆ ಸಂದರ್ಭದಲ್ಲಿ ನೀಡಿದ ಐದು ಗ್ಯಾರಂಟಿಗಳನ್ನು ಜಾರಿಗೊಳಿಸುವ ಮೂಲಕ ರಾಜ್ಯ ಬಡ ಜನರ ಕಲ್ಯಾಣಕ್ಕೆ ಶ್ರಮಿಸುತ್ತಿದೆ. ಕೇಂದ್ರದಲ್ಲೂ ಸಹ ಎಐಸಿಸಿ ರಾಷ್ಟ್ರೀಯ ಅಧ್ಯಕ್ಷ ಮಲ್ಲಿಕಾರ್ಜುನ್‌ಖರ್ಗೆ, ಎಐಸಿಸಿ ಉಪಾಧ್ಯಕ್ಷ ರಾಹುಲ್‌ಗಾಂಧಿ ಅನೇಕ ಕೊಡುಗೆಗಳನ್ನು ನೀಡಿದ್ದು, ಲೋಕಸಭಾ ಚುನಾವಣೆಯಲ್ಲಿ ಈ ಕ್ಷೇತ್ರದ ಅಭ್ಯರ್ಥಿ ಬಿ.ಎನ್.ಚಂದ್ರಪ್ಪನವರಿಗೆ ಮತ ನೀಡಿ ಲೋಕಸಭೆಗೆ ಆಯ್ಕೆ ಮಾಡಿಕಳಿಸಿ ಎಂದು ಮನವಿ ಮಾಡಿದರು. .ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕೆ.ವೀರಭದ್ರಪ್ಪ, ಪರಶುರಾಮಪುರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶಶಿಧರ, ಜಡೇಕುಂಟೆಮಂಜುನಾಥ, ಎಚ್.ಎಸ್.ಸೈಯದ್, ಮೂಡಲಗಿರಿಯಪ್ಪ, ಬಿ.ಪಿ.ಪ್ರಕಾಶ್‌ಮೂರ್ತಿ ಮನು, ಬಿ.ಎಂ.ಭಾಗ್ಯಮ್ಮ, ಲಕ್ಷ್ಮೀದೇವಿ, ಗೀತಾಬಾಯಿ, ಭಾಗ್ಯಲಕ್ಷ್ಮಿ, ಮಂಜಮ್ಮ ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಚಿತ್ರದುರ್ಗ ಬಿಜೆಪಿ ಅಭ್ಯರ್ಥಿ ಗೋವಿಂದ ಕಾರಜೋಳಪರ ಜೆಡಿಎಸ್ ಎಚ್‌ಡಿಕೆ ಮತಯಾಚನೆ

» ಚಳ್ಳಕೆರೆ



ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಜೆಡಿಎಸ್-ಬಿಜೆಪಿ ಮೈತ್ರಿಕೂಟದ ಅಭ್ಯರ್ಥಿ ಗೋವಿಂದ ಕಾರಜೋಳರವರ ಪರವಾಗಿ ಮತಯಾಚನೆ ಮಾಡಲು ಜೆಡಿಎಸ್ ಪಕ್ಷದ ಹಿರಿಯ ದುರೀಣ, ಮಾಜಿ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ಚಳ್ಳಕೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಪರಶುರಾಮಪುರ ಗ್ರಾಮಕ್ಕೆ ಏ.19ರ ಶುಕ್ರವಾರ ಮಧ್ಯಾಹ್ನ 1.30 ಕ್ಕೆ ಭೇಟಿ ನೀಡಿ ಮತಯಾಚನೆ ಮಾಡುವರು ಎಂದು ಜೆಡಿಎಸ್ ತಾಲ್ಲೂಕು ಅಧ್ಯಕ್ಷ ಪಿ.ತಿಪ್ಪೇಸ್ವಾಮಿ ತಿಳಿಸಿದ್ದಾರೆ. ಅವರು, ಈ ಬಗ್ಗೆ ಮಾಹಿತಿ ನೀಡಿ, ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಮೈತ್ರಿಕೂಟದ ಅಭ್ಯರ್ಥಿ ಪರ ಮತಯಾಚನೆ ಮಾಡಲು ಚಿತ್ರದುರ್ಗ ಲೋಕಸಭಾ ಕ್ಷೇತ್ರ ವ್ಯಾಪ್ತಿಯ ಪಾವಗಡ, ಚಳ್ಳಕೆರೆ ಮತ್ತು ಹಿರಿಯೂರು ತಾಲ್ಲೂಕುಗಳಲ್ಲಿ ಅವರು ಮತಯಾಚನೆ ಮಾಡುವರು. ಅಭ್ಯರ್ಥಿ ಗೋವಿಂದಕಾರಜೋಳರವರ ಗೆಲುವಿಗೆ ಮತದಾರರು ಸಹಕರಿಸುವಂತೆ ಅವರು ಮನವಿ ಮಾಡಲಿದ್ದಾರೆ. ಈ ಚುನಾವಣಾ ಪ್ರಚಾರದಲ್ಲಿ ಮಾಜಿ ಶಾಸಕರಾದ ಜಿ.ಎಚ್.ತಿಪ್ಪಾರೆಡ್ಡಿ, ತಿಮ್ಮರಾಯಪ್ಪ, ಸಂಚಾಲಕ ಲಿಂಗಮೂರ್ತಿ, ಶಾಸಕ ಎಂ.ಚಂದ್ರಪ್ಪ,ಬಿಜೆಪಿ ಜಿಲ್ಲಾಧ್ಯಕ್ಷ ಎ.ಮುರುಳಿ, ಜಿಲ್ಲಾ ಕಾರ್ಯದರ್ಶಿ ಬಾಳೆಮಂಡಿರಾಮದಾಸ್, ಮಧುಗಿರಿ ಜೆಡಿಎಸ್ ಜಿಲ್ಲಾಧ್ಯಕ್ಷ ಬಿ.ಸಿ.ಹನುಮಂತೇಗೌಡ, ಚಿತ್ರದುರ್ಗ ಜಿಲ್ಲಾಧ್ಯಕ್ಷ ಜಯಣ್ಣ, ತುಮಕೂರು ಜಿಲ್ಲಾಧ್ಯಕ್ಷ ಅಂಜಿನಪ್ಪ, ಮಂಡಲಾಧ್ಯಕ್ಷ ಸೂರನಹಳ್ಳಿ ಶ್ರೀನಿವಾಸ್, ಜೆ.ಪಿ.ಜಯಪಾಲಯ್ಯ ಮುಂತಾದ ಮುಖಂಡರು ಸಭೆಯಲ್ಲಿ ಪಾಲ್ಗೊಳ್ಳುವರು.

### ಮೊದಲ ಹಂತದ ಚುನಾವಣೆ, ಗಡಿಭಾಗದಲ್ಲಿನ ಮದ್ಯದಂಗಡಿ ಮುಚ್ಚಿ: ಡಿಸಿ

» ದಾವಣಗೆರೆ

ಲೋಕಸಭಾ ಸಾರ್ವತ್ರಿಕ ಚುನಾವಣೆ ನಡೆಯುತ್ತಿದ್ದು ದೇಶದ ಎರಡನೇ ಹಂತ, ರಾಜ್ಯದಲ್ಲಿ ಮೊದಲ ಹಂತದಲ್ಲಿ ಜಿಲ್ಲೆಯ ಗಡಿ ಹೊಂದಿರುವ ಜಿಲ್ಲೆಗಳಾದ ಉಡುಪಿ-ಚಿಕ್ಕಮಗಳೂರು ಮತ್ತು ಚಿತ್ರದುರ್ಗ ಕ್ಷೇತ್ರಗಳಿಗೆ ಏ.26 ರಂದು ಮತದಾನ ನಡೆಯುವುದರಿಂದ ಈ ಜಿಲ್ಲೆಯ ಗಡಿಯಿಂದ 5 ಕಿ.ಮೀ ಜಿಲ್ಲಾ ವ್ಯಾಪ್ತಿಯಲ್ಲಿ ಏ.24 ರಂದು ಸಂಜೆ 5.00 ಗಂಟೆಯಿಂದ ಏ.26 ರ ಮಧ್ಯರಾತ್ರಿಯವರೆಗೆ ಮದ್ಯ ಮಾರಾಟ ಮಾಡದಂತೆ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಡಾ; ವೆಂಕಟೇಶ್ ಎಂ.ವಿ ಆದೇಶಿಸಿದ್ದಾರೆ. ಚಿತ್ರದುರ್ಗ, ಚಿಕ್ಕಮಗಳೂರು ಜಿಲ್ಲೆಯ ಗಡಿ ಭಾಗದಿಂದ 05 ಕಿ.ಮೀ ವ್ಯಾಪ್ತಿಯಲ್ಲಿ ಮದ್ಯದಂಗಡಿ, ಬಾರ್ ಮತ್ತು ರೆಸ್ಟೋರೆಂಟ್ ಮುಚ್ಚಲು ಹಾಗೂ ಎಲ್ಲ ಬಗೆಯ ಮದ್ಯ ಮಾರಾಟವನ್ನು ನಿಷೇಧಿಸಿ ಆದೇಶಿಸಲಾಗಿದೆ.

### ಆಯುಷ್ ಇಲಾಖೆ ಸಲಹೆ

» ದಾವಣಗೆರೆ

ಬೇಸಿಗೆ ಬಂತೆಂದರೆ ಬಿಸಿಲಿನ ತಾಪಕ್ಕೆ ಯಾವ ಊಟವು ರುಚಿಸದು ಮತ್ತು ಬಾಯಾರಿಕೆ ತಣಿಸಲು ತಂಪು ಪಾನೀಯಗಳಿಗೆ ಮೊರೆ ಹೋಗುವವರೇ ಹೆಚ್ಚು, ಆಯುಷ್ ಇಲಾಖೆ ಜನರ ಆರೋಗ್ಯ ವೃದ್ಧಿ ಜೊತೆಗೆ ಬಿಸಿಲಿನ ಬಾಯಾರಿಕೆ ದಾಹ ಕಡಿಮೆ ಮಾಡಲು ಆಯುಷ್ ಪದ್ದತಿಯ ಚಿಂಚಾ ಪಾನಕದ ಪರಿಚಯ ಮಾಡಿದ್ದು ಇದು ಆರೋಗ್ಯ ಸಂರಕ್ಷಣೆಗೆ ಬಹು ಉಪಯೋಗಿ ಎಂದು ಜಿಲ್ಲಾಧಿಕಾರಿ ಡಾ.ವೆಂಕಟೇಶ್ ಎಂ.ವಿ ತಿಳಿಸಿದರು. ಅವರು ಗುರುವಾರ ಆಯುಷ್ ಇಲಾಖೆಯಿಂದ ಪರಿಚಯಿಸುತ್ತಿರುವ ಆರೋಗ್ಯಕರ ಆಯುಷ್ ಪಾನಕ ಪರಿಚಯ ಕಾರ್ಯಕ್ರಮದ ಅಂಗವಾಗಿ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಚಿಂಚಾ ಪಾನಕ ಪ್ರಾತ್ಯಕ್ಷಿಕೆ ಕಾರ್ಯಕ್ರಮದಲ್ಲಿ ಪಾನಕ ಸ್ವಾಧಿಸುವ ಮೂಲಕ ಉದ್ಘಾಟಿಸಿ ಮಾತನಾಡಿದರು.ಗಾದೆಯ ಮಾತು, ಹಿತ್ತಲ ಗಿಡ ಮದ್ದಲ್ಲ ಎಂಬಂತೆ ನಮ್ಮ ಮನೆಯಲ್ಲಿಯೇ ಸಿಗುವ ವಸ್ತುಗಳಲ್ಲಿಯೇ ಆರೋಗ್ಯ ವೃದ್ಧಿ, ಸಂರಕ್ಷಣೆ, ರೋಗನಿರೋಧಕ ಅಂಶಗಳಿರುತ್ತವೆ. ಆದರೆ ನಮಗೆ ಅವನ್ನು ತಯಾರಿಸಿಕೊಳ್ಳುವ ವಿಧಾನದ ಅರಿವಿರಬೇಕು. ಆಯುಷ್ ಇಲಾಖೆ ಮನೆಯಲ್ಲಿ ಸಿಗುವ ವಸ್ತುಗಳನ್ನು ಉಪಯೋಗಿಸಿ ತಯಾರಿಸಬಹುದಾದ ಚಿಂಚಾ ಪಾನಕ ಅಂದರೆ ಹುಣಸೆ ಹಣ್ಣಿನ ಪಾನಕ ಎಂದು ಇದನ್ನು ಕರೆಯಲಾಗುತ್ತದೆ. ಇದರಿಂದ ಬಾಯಾರಿಕೆ ಕಡಿಮೆ, ಜೊತೆಗೆ ದೇಹದಲ್ಲಿನ ಉಷ್ಣತೆಯನ್ನು ತಗ್ಗಿಸಲಿದ್ದು ಮಲಬದ್ದತೆ ನಿವಾರಿಸಲಿದೆ, ಇದು ಆರೋಗ್ಯಕರ ಪಾನಿಯವಾಗಿದೆ ಎಂದರು.ಚಿಂಚಾ ಪಾನಕ ತಯಾರಿಸುವ ವಿಧಾನ. 5 ಲೀಟರ್ ಪಾನಕ ತಯಾರಿಸಲು 100 ಗ್ರಾಂ ಹುಣಸೆ ಹಣ್ಣು, 40 ಗ್ರಾಂ ಬೆಲ್ಲದ ಪುಡಿ, 10 ಗ್ರಾಂ ಜೀರಿಗೆ ಪುಡಿ, 5 ಗ್ರಾಂ ಕಾಳು ಮೆಣಸಿನ ಪುಡಿ, 5 ಗ್ರಾಂ ಸೈಂಧವ ಲವಣ ಮಿಶ್ರಣ ಮಾಡಬೇಕು. ಸೇವನೆ ಮಾತ್ರ 50 ರಿಂದ 100 ಮಿಲಿಯಷ್ಟು ಅಗತ್ಯ ನೀರು ಸೇರಿಸಿಕೊಂಡು ಕುಡಿಯಬೇಕು. ಉದ್ಘಾಟನಾ ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಸೈಯ್ಯದಾ ಆಫ್ರೀನ್ ಭಾನು ಎಸ್.ಬಳ್ಳಾರಿ, ಜಿಲ್ಲಾ ಆಯುಷ್ ಅಧಿಕಾರಿ ಡಾ.ಯೋಗೇಂದ್ರಕುಮಾರ್, ಎನ್.ಐ.ಸಿ.ಅಧಿಕಾರಿ ಉದಯ್, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಅಧಿಕಾರಿ ಮಲ್ಲಿಕಾರ್ಜುನ ಮಠದ್, ಡಾ.ಸುರೇಶ್ ಕುಮಾರ್ ಎಂ.ಸಿ ಉಪಸ್ಥಿತರಿದ್ದರು.

# ಮೋದಿ ಪ್ರಧಾನಿಯಾದಾಗ ಮಾತ್ರ ಮಾದಿಗರ ಮೀಸಲಾತಿ ವರ್ಗೀಕರಣ ಸಾಧ್ಯ: ಮಂದಕೃಷ್ಣ

» ಚಿತ್ರದುರ್ಗ




ನರೇಂದ್ರಮೋದಿ ಮೂರನೆ ಬಾರಿಗೆ ದೇಶದ ಪ್ರಧಾನಿಯಾದಾಗ ಮಾತ್ರ ಮಾದಿಗರ ಮೀಸಲಾತಿ ವರ್ಗಿಕರಣ ಸಾಧ್ಯ ಎಂದು ಮಾದಿಗ ಮೀಸಲಾತಿ ಹೋರಾಟ ಸಮಿತಿ ರಾಷ್ಟ್ರೀಯ ಅಧ್ಯಕ್ಷ ಮಂದಕೃಷ್ಣ ಮಾದಿಗ ಹೇಳಿದರು.

ಬಿಜೆಪಿ. ಕಚೇರಿಯಲ್ಲಿ ಗುರುವಾರ ಸುದ್ದಿಗೋಷ್ಟಿಯಲ್ಲಿ ಮಾತನಾಡಿದ ಅವರು ಬಿಜೆಪಿ. ಸರ್ಕಾರ ಪರಿಶಿಷ್ಠ ಜಾತಿ ಪರಿಶಿಷ್ಟ ವರ್ಗದವರ ಪರವಾಗಿದೆ. ಕೇಂದ್ರದಲ್ಲಿ ಬಿಜೆಪಿ. ಅಧಿಕಾರಕ್ಕೆ ಬಂದರೆ ಸಂವಿಧಾನವನ್ನು ಬದಲಾವಣೆ ಮಾಡುತ್ತಾರೆಂದು ಕಾಂಗ್ರೆಸ್‌ನವರು ದಲಿತರಲ್ಲಿ ಭೀತಿ ಹುಟ್ಟಿಸುತ್ತಿದ್ದಾರೆ. ಕಾಂಗ್ರೆಸ್ ಸರ್ಕಾರದಲ್ಲಿ ಕೇವಲ ನಲವತ್ತು ಪರ್ಸೆಂಟ್ ಎಸ್ಸಿ.ಎಸ್ಟಿ.ಗಳಿಗೆ ಸಚಿವ ಸ್ಥಾನ ಕೊಡಲಾಗಿತ್ತು. ಅದೇ ಬಿಜೆಪಿ. ಸರ್ಕಾರದಲ್ಲಿ ಪರಿಶಿಷ್ಟ ಜಾತಿ ಪರಿಶಿಷ್ಟ ವರ್ಗದವರಿಗೆ ಶೇ. 60 ಪರ್ಸೆಂಟ್ ಸಚಿವ ಸ್ಥಾನ ನೀಡಲಾಗಿತ್ತು ಎಂದರು.

ಮನಮೋಹನ್‌ಸಿಂಗ್ ದೇಶದ ಪ್ರಧಾನಿಯಾಗಿದ್ದಾಗ ಪ್ರಣಬ್‌ಮುಖರ್ಜಿ ಹಾಗೂ ಪ್ರತಿಭಾ ಪಾಟೀಲ್ ಇವರುಗಳನ್ನು ರಾಷ್ಟ್ರಪತಿಯನ್ನಾಗಿ ಮಾಡಿ ಬ್ರಾಹ್ಮಣರನ್ನು ಓಲೈಸುವ ಕೆಲಸ ಮಾಡಿತು.

ಅದೇ ಈಗಿನ ನಮ್ಮ ಪ್ರಧಾನಿ ನರೇಂದ್ರಮೋದಿ ಬುಡಕಟ್ಟು ಸಮುದಾಯದ ದ್ರೌಪದಿ ಮುರ್ಮುರನ್ನು ರಾಷ್ಟ್ರಪತಿಯನ್ನಾಗಿ ಮಾಡಿ ಶೋಷಿತರ ಪರವಾಗಿದ್ದೇವೆನ್ನುವುದನ್ನುತೋರಿಸಿದರು. ಕೇಂದ್ರದಲ್ಲಿ ಯು.ಪಿ.ಎ.ಸರ್ಕಾರ ಅಧಿಕಾರದಲ್ಲಿದ್ದಾಗ ಸೋನಿಯಾಗಾಂಧಿ, ರಾಹುಲ್‌ಗಾಂಧಿ, ಮಲ್ಲಿಕಾರ್ಜುನ ಖರ್ಗೆ ಇವರುಗಳನ್ನು ಸಾಕಷ್ಟು ಬಾರಿ ಭೇಟಿಯಾಗಿ ಮಾದಿಗರ ಮೀಸಲಾತಿ ವರ್ಗೀಕರಣಗೊಳಿಸುವಂತೆ ಮನವಿ ಮಾಡಿದ್ದೆ. ಯಾರು ಕಿವಿಗೆ ಹಾಕಿಕೊಳ್ಳಲಿಲ್ಲ. ನಮ್ಮ ಹೋರಾಟಕ್ಕೆ ಕಾಂಗ್ರೆಸ್ ವಿರುದ್ದವಿದೆ. ಹೈದರಾಬಾದ್‌ನಲ್ಲಿ ನಡೆದ ಮಾದಿಗರ ಮೀಸಲಾತಿ ವರ್ಗಿಕರಣ ಸಮಾವೇಶದಲ್ಲಿ ಭಾಗವಹಿಸಿದ್ದ ಪ್ರಧಾನಿ ಮೋದಿ ಮೀಸಲಾತಿ ವರ್ಗಿಕರಣಗೊಳಿಸುವುದಾಗಿ ಭರವಸೆ ಕೊಟ್ಟಿದ್ದರು.

ಹಾಗಾಗಿ ಈ ಬಾರಿಯ ಲೋಕಸಭೆ ಚುನಾವಣೆಯಲ್ಲಿ ಬಿಜೆಪಿ. ಅಭ್ಯರ್ಥಿಗಳಿಗೆ ನಮ್ಮ ಸಂಪೂರ್ಣ ಬೆಂಬಲವಿದೆ. ಕೇವಲ ಕರ್ನಾಟಕವಷ್ಟೆ ಅಲ್ಲ. ತೆಲಂಗಾಣ, ಆಂಧ್ರ, ತಮಿಳುನಾಡು, ಮಹಾರಾಷ್ಟ್ರ, ಛತ್ತಿಸ್‌ಗಡದಲ್ಲಿಯೂ ಬಿಜೆಪಿ. ಗೆಲುವಿಗೆ ಶ್ರಮಿಸುತ್ತೇವೆಂದರು.ರಾಜ್ಯದಲ್ಲಿ ಮುಖ್ಯಮಂತ್ರಿಯಾಗಿದ್ದ ಬಸವರಾಜ್ ಬೊಮ್ಮಾಯಿ ಮಾದಿಗರ ಮೀಸಲಾತಿ ವರ್ಗಿಕರಣಕ್ಕೆ ಕೇಂದ್ರಕ್ಕೆ ಶಿಫಾರಸ್ಸು ಮಾಡಿದ್ದರು.

ಎಸ್.ಎಂ.ಕೃಷ್ಣ ರಾಜ್ಯದ ಮುಖ್ಯಮಂತ್ರಿಯಾಗಿದ್ದಾಗ ಸದಾಶಿವ ಆಯೋಗ ನೇಮಿಸಿದ್ದರು ಕೂಡ ಕಾಂಗ್ರೆಸ್ ನಮಗೆ ವ್ಯತಿರಿಕ್ತವಾಗಿದೆ. ಸುಪ್ರಿಂಕೋರ್ಟ್‌ನಲ್ಲಿ ಕೇಸು ಬಾಕಿಯಿದ್ದು, ವಿಚಾರಣೆ ನಡೆಯುತ್ತಿದೆ. ಮಾದಿಗರ ಮೀಸಲಾತಿ ವರ್ಗಿಕರಣಕ್ಕೆ ನ್ಯಾಯ ಕೊಡಿಸುವುದು ನನ್ನ ಹೋರಾಟದ ಉದ್ದೇಶ. ಯು.ಪಿ.ಎ.ಸರ್ಕಾರದಲ್ಲಿ ಮೀಸಲಾತಿ ಎನ್ನುವುದು ಮುಂದೆ ಸಾಗಲಿಲ್ಲ. ಮೀಸಲಾತಿ ವರ್ಗಿಕರಣಕ್ಕೆ ಅಡ್ಡಿಯಾಗಿರುವ ಕಾಂಗ್ರೆಸ್ ಪಕ್ಷವನ್ನು ಈ ಬಾರಿಯ ಚುನಾವಣೆಯಲ್ಲಿ ಸೋಲಿಸಿ ಕೇಂದ್ರದಲ್ಲಿ ಮತ್ತೊಮ್ಮೆ ಬಿಜೆಪಿ.ಯನ್ನು ಅಧಿಕಾರಕ್ಕೆ ತರಬೇಕಾಗಿರುವುದರಿಂದ ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಬಿಜೆಪಿ. ಅಭ್ಯರ್ಥಿ ಗೋವಿಂದ ಕಾರಜೋಳರನ್ನು ಬಹುಮತಗಳಿಂದ ಗೆಲ್ಲಿಸಿ ಎಂದು ಮಂದಕೃಷ್ಣ ಮಾದಿಗ ಮನವಿ ಮಾಡಿದರು. ಮಾದಿಗ ಮೀಸಲಾತಿ ವರ್ಗಿಕರಣ ಹೋರಾಟ ಸಮಿತಿ ರಾಜ್ಯಾಧ್ಯಕ್ಷ ನರಸಪ್ಪ, ಬಿಜೆಪಿ. ಜಿಲ್ಲಾಧ್ಯಕ್ಷ ಎ.ಮುರಳಿ, ಮಾಧ್ಯಮ ವಕ್ತಾರ ದಗ್ಗೆಶಿವಪ್ರಕಾಶ್, ವಕ್ತಾರ ನಾಗರಾಜ್‌ಬೇದ್ರೆ, ತಿಪ್ಪೇಸ್ವಾಮಿ ಛಲವಾದಿ, ಮಂಜಣ್ಣ ಚಿಕ್ಕಾಲಘಟ್ಟ, ಹನುಮಂತಪ್ಪ ದುರ್ಗ, ದೇವರಾಜ್ ನಗರಂಗೆರೆ, ಮೋಹನ್ ಇವರುಗಳು ಪತ್ರಿಕಾಗೋಷ್ಠಿಯಲ್ಲಿ ಹಾಜರಿದ್ದರು.

### ತಾ.ಪಂ ಇಒ ಅನಂತರಾಜು ಹೇಳಿಕೆ
## ಮತದಾನದ ಮೂಲಕ ಪ್ರಜಾಪ್ರಭುತ್ವ ಸಧೃಡಗೊಳಿಸಿ

» ಚಿತ್ರದುರ್ಗ




ಅರ್ಹ ಮತದಾರರು ಮತದಾನ ಮಾಡುವ ಮೂಲಕ ಪ್ರಜಾಪ್ರಭುತ್ವವನ್ನು ಸಧೃಡಗೊಳಿಸಬೇಕು ಎಂದು ಚಿತ್ರದುರ್ಗ ತಾಲ್ಲೂಕು ಸ್ವೀಪ್ ಸಮಿತಿ ಅಧ್ಯಕ್ಷ ಹಾಗೂ ತಾ.ಪಂ ಇಒ ಅನಂತರಾಜು ಹೇಳಿದರು.

ಚಿತ್ರದುರ್ಗ ತಾಲ್ಲೂಕಿನ ಭರಮಸಾಗರ ಗ್ರಾಮದ ಹಳೇ ಬಸ್ ನಿಲ್ದಾಣ ವೃತ್ತದಲ್ಲಿ ಬುಧವಾರ ಮುಂಜಾನೆ ನಡೆದ ಮತದಾನ ಜಾಗೃತಿ ಜಾಥಾದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಚಿತ್ರದುರ್ಗ ಲೋಕಸಭಾ ಕ್ಷೇತ್ರಕ್ಕೆ ಬರುವ ಏಪ್ರಿಲ್ 26 ರಂದು ಮತದಾನ ನಡೆಯಲಿದೆ. 18 ವರ್ಷ ಮೇಲ್ಪಟ್ಟ ಪುರುಷರು, ಮಹಿಳೆಯರು, ಹಿರಿಯ ನಾಗರೀಕರು,

ಅಂಗವಿಕಲರು, ತೃತೀಯ ಲಿಂಗಿಗಳು ಯಾವುದೇ ಬೇಧ ಭಾವಗಳಿಲ್ಲದೆ ಮತಗಟ್ಟೆಗೆ ತೆರಳಿ ತಪ್ಪದೇ ಮತದಾನ ಮಾಡಬೇಕು. ಪ್ರಜಾಪ್ರಭುತ್ವದ ಗಟ್ಟಿಯಾಗಬೇಕಾದರೆ ಮುಕ್ತ ಹಾಗೂ ನ್ಯಾಯ ಸಮ್ಮತವಾಗಿ ಯಾವುದೇ ಆಸೆ ಆಮಿಷಗಳಿಗೆ ಒಳಗಾಗದೆ ಮತ ಚಲಾಯಿಸಬೇಕು. ಚುನಾವಣಾ ಆಯೋಗದಿಂದ ಮತದಾನಕ್ಕೆ ಸಕಲ ಸಿದ್ಧತೆಗಳನ್ನು ಕೈಗೊಳ್ಳಲಾಗಿದೆ. ಯಾವುದೇ ಭಯ, ಭೀತಿ ಇಲ್ಲದೆ ನಿರ್ಭೀತರಾಗಿ ಮತಚಲಾಯಿಸಿ. ಅರ್ಹ ಮತದಾರರು ಮತದಾನದಿಂದ ಯಾವುದೇ ಕಾರಣಕ್ಕೂ ಹೊರಗುಳಿಯಬಾರದು ಎಂದು ಹೇಳಿದರು.

ಅಮೂಲ್ಯವಾದ ಮತ ಚಲಾಯಿಸಿ, ಉತ್ತಮ ವ್ಯಕ್ತಿಯನ್ನು ಆಯ್ಕೆ ಮಾಡಬಹುದು.

ನಿಮ್ಮ ಪ್ರತಿಯೊಂದು ಮತ ದೇಶ ನಿರ್ಮಾಣ ಮಾಡವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ ಎಂದು ತಾ.ಪಂ. ಇಒ ಅನಂತರಾಜು ಅಭಿಪ್ರಾಯ ಪಟ್ಟರು. ಇದೇ ವೇಳೆ ನೆರೆದಿದ್ದ ಸಾರ್ವಜನಿಕರಿಗೆ ಮತದಾನ ಪ್ರತಿಜ್ಞೆ ಬೋಧಿಸಲಾಯಿತು.

ಜಾಗೃತಿ ಕಾರ್ಯಕ್ರಮದಲ್ಲಿ ಭರಮಸಾಗರ ಗ್ರಾಮದ ಪಿ.ಡಿ.ಓ, ಸಿಬ್ಬಂದಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಅಧಿಕಾರಿಗಳು, ಆಶಾ, ಅಂಗನವಾಡಿ ಕಾರ್ಯಕರ್ತೆಯರು, ಸ್ತ್ರೀ ಶಕ್ತಿ ಸಂಘಗಳ ಮಹಿಳಾ ಸದಸ್ಯರು ಸೇರಿದಂತೆ ಮತ್ತಿತರರು ಪಾಲ್ಗೊಂಡಿದ್ದರು.

## ಎತ್ತಿನ ಬಂಡಿ ಮೆರವಣಿಗೆ ಮೂಲಕ ಮತದಾನ ಜಾಗೃತಿ



» ಚಿತ್ರದುರ್ಗ

ತಾಲ್ಲೂಕು ಸ್ವೀಪ್ ಸಮಿತಿ ವತಿಯಿಂದ ಹಿರೇಗುಂಟನೂರು ಹೋಬಳಿ ವ್ಯಾಪ್ತಿಯಲ್ಲಿ ಲೋಕಸಭಾ ಸಾರ್ವತ್ರಿಕ ಚುನಾವಣೆ ಪ್ರಯುಕ್ತ ಸಾಂಪ್ರಾದಾಯಿಕ ಎತ್ತಿನ ಬಂಡಿಯ ಮೆರವಣಿಗೆ ಮೂಲಕ ಮತದಾನ ಜಾಗೃತಿ ಜಾಥಾ ನಡೆಯಿತು. ಎತ್ತಿನ ಬಂಡಿ ಮೆರವಣಿಗೆ ಮೂಲಕ ಮತದಾನ ಜಾಗೃತಿ ಮೂಡಿಸಿದ್ದು, ಎಲ್ಲರ ಗಮನ ಸೆಳೆಯಿತು. ಇದರ ಜೊತೆಗೆ ಬಣ್ಣ ಬಣ್ಣದ ರಂಗೋಲಿಗಳ ಚಿತ್ತಾರಗಳ ಮೂಲಕ "ನನ್ನ ಮತ ನನ್ನ ಹಕ್ಕು" ಎಂಬ ಮತದಾನದ ಮಹತ್ವ ಸಾರುವ ಮೂಲಕ ಮತದಾರರಿಗೆ ಮತದಾನದ ಕುರಿತು ಜಾಗೃತಿ ಮೂಡಿಸಲಾಯಿತು. ಇದೇ ವೇಳೆ ನೆರದಿದ್ದ ನಾಗರಿಕರಿಗೆ ಮತದಾನದ ಪ್ರತಿಜ್ಞಾವಿಧಿ ಬೋಧಿಸಲಾಯಿತು. ಕಾರ್ಯಕ್ರಮದಲ್ಲಿ ಚಿತ್ರದುರ್ಗ ತಾಲ್ಲೂಕು ಸ್ವೀಪ್ ಸಮಿತಿ ಅಧ್ಯಕ್ಷರು ಹಾಗೂ ಕಾರ್ಯನಿರ್ವಾಹಕ ಅಧಿಕಾರಿಗ ಅನಂತರಾಜು ಸೇರಿದಂತೆ ತಾಲ್ಲೂಕಿನ ವಿವಿಧ ಇಲಾಖಾ ಮಟ್ಟದ ಅಧಿಕಾರಿಗಳು ಮತ್ತು ಹಿರೇಗುಂಟನೂರು ಹೋಬಳಿ ವ್ಯಾಪ್ತಿಯ ಎಲ್ಲಾ ಪಿ.ಡಿ.ಓ ಹಾಗೂ ಸಿಬ್ಬಂದಿ ವರ್ಗದವರು, ಆಶಾ ಹಾಗೂ ಅಂಗನವಾಡಿ ಕಾರ್ಯಕರ್ತರು ಇದ್ದರು.

## ಕಾಲುವೇಹಳ್ಳಿ : ರಾಮನವಮಿ ಪ್ರಯುಕ್ತ ಶ್ರೀಆಂಜನೇಯಸ್ವಾಮಿಯ ಪಲ್ಲಕ್ಕಿ ಉತ್ಸವ ಯಶಸ್ವಿ

» ಚಳ್ಳಕೆರೆ

ತಾಲ್ಲೂಕಿನ ತಳಕು ಹೋಬಳಿಯ ಕಾಲುವೇಹಳ್ಳಿ ಗ್ರಾಮದಲ್ಲಿ ಪ್ರತಿವರ್ಷದಂತೆ ಈ ವರ್ಷವೂ ರಾಮನವಮಿ ಪ್ರಯುಕ್ತ ಆಂಜನೇಯಸ್ವಾಮಿ ದೇವಸ್ಥಾನದಲ್ಲಿ ಭಕ್ತರೆಲ್ಲರೂ ಸೇರಿ ಪಲ್ಲಕ್ಕಿ ಉತ್ಸವವನ್ನು ಅದ್ದೂರಿಯಾಗಿ ನಡೆಸಿದರು.

ಈ ಬಗ್ಗೆ ಮಾಹಿತಿ ನೀಡಿದ ಪೂಜಾರಿಶ್ರೀಧರ, ರಾಮನವಮಿ ಹಿನ್ನೆಲೆಯಲ್ಲಿ ಪ್ರತಿವರ್ಷ ಈ ಕಾರ್ಯಕ್ರಮವನ್ನು ಭಕ್ತ ಸಹಕಾರದಿಂದ ಹಮ್ಮಿಕೊಳ್ಳಲಾಗುತ್ತದೆ. ಶ್ರೀಆಂಜನೇಯಸ್ವಾಮಿ ದೇವಸ್ಥಾನದಿಂದ ಉತ್ಸವ ಮೂರ್ತಿಯನ್ನು ಹೂವಿನ ಪಲ್ಲಕ್ಕಿಯಲ್ಲಿ ಮೆರವಣೆಗೆ ಮೂಲಕ ಗ್ರಾಮದ ಪ್ರಮುಖ ಬೀದಿಗಳಲ್ಲಿ ಮಂಗಳವಾದ್ಯ, ಭಜನೆಯೊಂದಿಗೆ ಮೆರವಣಿಗೆ ಮಾಡಲಾಗುವುದು.ನಂತರದೇವಸ್ಥಾನದಲ್ಲಿ ಶ್ರೀಸ್ವಾಮಿಗೆ ವಿಶೇಷ ಅಲಂಕಾರ, ಪೂಜಾ ಕಾರ್ಯಕ್ರಮಗಳನ್ನು ನಡೆಸಲಾಗುತ್ತದೆ. ಪೂಜೆಯ ನಂತರ ಆಗಮಿಸಿದ ಎಲ್ಲಾ ಭಕ್ತರಿಗೆ ಪಾನಕ, ಕೋಸಂಬರಿಯನ್ನು



ವಿತರಣೆ ಮಾಡಲಾಗುತ್ತದೆ. ಗ್ರಾಮದ ಬಹುತೇಕ ಭಕ್ತರು ಈ ಕಾರ್ಯದಲ್ಲಿ ಸ್ವಯಂ ಪ್ರೇರಣೆಯಿಂದ ಭಾಗಹಿಸುವರು ಎಂದರು.

ಈ ಸಂದರ್ಭದಲ್ಲಿ ಕೆ.ಒ.ಪಾಲಯ್ಯ, ಜಿ.ಎಚ್.ರಾಘವೇಂದ್ರ,ಯನ್ನಪ್ಪ,ಕರಿಬಸಪ್ಪ, ಡಿ.ಆರ್.ತಿಮ್ಮಣ್ಣ, ಕೆ.ಬಿ.ಪಾಲಯ್ಯ, ವಿನೋದಮ್ಮ, ರಂಗಸ್ವಾಮಿ, ಶ್ರೀನಿವಾಸ್, ಜಾಜೂರುಪಾಲಯ್ಯ,ಎಂ.ಟಿ.ಕೃಷ್ಣಮೂರ್ತಿ ಮುಂತಾದವರು ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದರು.

**ಪ್ರಮುಖ ಸುದ್ದಿ**

# ಅಧಿಕಾರಿಗಳಿಗೆ ಎಲೆಕ್ಟ್ರೋ ಆ್ಯಪ್ ಡೌನ್ಲೋಡ್ ಕುರಿತು ತರಬೇತಿ

» ಚಳ್ಳಕೆರೆ



ಚಿತ್ರದುರ್ಗ ಲೋಕಸಭಾ ವ್ಯಾಪ್ತಿಯ ಚಳ್ಳಕೆರೆ ವಿಧಾನಸಭಾ ಕ್ಷೇತ್ರದಲ್ಲಿ ಏ.26ರಂದು ನಡೆಯುವ ಮತದಾನಕ್ಕೆ ಸಂಬಂಧಪಟ್ಟಂತೆ ಒಂದು ಹಂತದ ತರಬೇತಿ ನೀಡಲಾಗಿದ್ದು, ಕ್ಷೇತ್ರದ 260 ಮತಗಟ್ಟೆ ಅಧಿಕಾರಿಗಳಿಗೆ ಎಲೆಕ್ಟ್ರೋ ಪರಿಶೀಲನ ಯ್ಯಾಪ್ ಕುರಿತಂತೆ ತರಬೇತಿ ನೀಡಲಾಗಿದೆ ಎಂದು ಸಹಾಯಕ ಚುನಾವಣಾಧಿಕಾರಿ ಬಿ.ಆನಂದ ತಿಳಿಸಿದರು.

ಅವರು, ಪತ್ರಿಕೆಗೆ ಮಾಹಿತಿ ನೀಡಿ, ನಗರದ ಎಚ್‌ಪಿಪಿಸಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಈಗಾಗಲೇ ಚುನಾವಣೆಗೆ ಸಂಬಂಧಪಟ್ಟ ತರಬೇತಿ ಹಾಗೂ ಎಲೆಕ್ಟ್ರೋ ಮತಯಂತ್ರಗಳ ಪರಿಶೀಲನೆ ಕುರಿತಂತೆ ಹಂತ, ಹಂತವಾಗಿ ತರಬೇತಿ ನೀಡಲಾಗುತ್ತಿದೆ. ವಿಶೇಷವಾಗಿ ಈ ಬಾರಿ ಮತ್ತೊಮ್ಮೆ ಮತಗಟ್ಟೆ ಅಧಿಕಾರಿಗಳಿಗೆ ಸೂಕ್ತ ಮಾಹಿತಿ ಇರಲೆಂದು ಪ್ರಾತ್ಯಕ್ಷತೆಯೊಂದಿಗೆ ತರಬೇತಿ ನೀಡಲಾಗಿದೆ. ಕ್ಷೇತ್ರದ ಎಲ್ಲಾ ಮತಗಟ್ಟೆ ಅಧಿಕಾರಿಗಳ ಮೊಬೈಲ್‌ನಲ್ಲೂ ಸಹ ಈ ಯ್ಯಾಪ್ ಡೌನೋಡ್ ಮಾಡಿಕೊಂಡು ಎಲ್ಲಾ ಮಾಹಿತಿಯನ್ನು ಪಡೆಯಲು ಸಹಕಾರಿಯಾಗಲಿದೆ. ಚುನಾವಣಾ ಕಾರ್ಯಕ್ಕೆನಿಯೋಜನೆಗೊಂಡ ಮತಗಟ್ಟೆ ಅಧಿಕಾರಿಗಳಿಗೆ ಇದರಿಂದ ಹೆಚ್ಚು ಉಪಯುಕ್ತವಾಗಲಿದೆ ಎಂದರು.

ತಹಶೀಲ್ಧಾರ್ ರೇಹಾನ್‌ಪಾಷ ಮಾತನಾಡಿ, ಚುನಾವಣಾ ಸಂದರ್ಭದಲ್ಲಿ ಮತಗಟ್ಟೆ ಅಧಿಕಾರಿಗಳೂ ಸೇರಿದಂತೆ ಚುನಾವಣಾ ಕರ್ತವ್ಯಕ್ಕೆ ನಿಯೋಜಿಸಿದ್ದ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗಕ್ಕೆ ಹಂತ, ಹಂತವಾಗಿ ಚುನಾವಣಾ ಆಯೋಗದ ಸೂಚನೆಯಂತೆ ತರಬೇತಿ ನೀಡಲಾಗುತ್ತಿದೆ. ಏ.26ರಂದು ನಡೆಯುವ ಮತದಾನ ಯಾವುದೇ ಆತಂಕವಿಲ್ಲದೆ ನಡೆಯಬೇಕೆಂಬುವುದು ಆಯೋಗದ ಉದ್ದೇಶವಾಗಿದೆ. ಈ ನಿಟ್ಟಿನಲ್ಲಿ ಎಲ್ಲರೂ ಪರಿಶ್ರಮದಿಂದ ಕಾರ್ಯನಿರ್ವಹಿಸುವ ಅವಶ್ಯಕತೆ ಇದೆ ಎಂದರು.

ಚುನಾವಣಾ ಕರ್ತವ್ಯಕ್ಕೆ ವಿಶೇಷ ಬಸ್‌ಗಳು :- ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಚುನಾವಣೆಗೆ ಸಂಬಂಧಪಟ್ಟಂತೆ ಚಳ್ಳಕೆರೆ ತಾಲ್ಲೂಕಿನ ಚುನಾವಣಾ ಸಿಬ್ಬಂದಿಯನ್ನು ಬೇರೆ ತಾಲ್ಲೂಕುಗಳಿಗೆ ಕರ್ತವ್ಯದ ಮೇಲೆ ನಿಯೋಜಿಸಿದ್ದು ಅವರುಗಳಿಗೆ ನಿಗದಿಪಡಿಸಿದ ಸ್ಥಳಕ್ಕೆ ತೆರಳಲು ಕೆಎಸ್‌ಆರ್‌ಟಿಸಿ 11 ವಾಹನಗಳನ್ನು ಪಡೆದಿದ್ದು ಏ.20ರ ಶನಿವಾರ ಬೆಳಗ್ಗೆ 6ಕ್ಕೆ ವಾಹನಗಳು ಎಚ್‌ಪಿಸಿಸಿ ಕಾಲೇಜು ಆವರಣಕ್ಕೆ ಆಗಮಿಸಲಿವೆ, ಸಿಬ್ಬಂದಿ ಸಕಾಲಕ್ಕೆ ಆಗಮಿಸುವಂತೆ ಸೂಚನೆ ನೀಡಲಾಗಿದೆ.

ಬಿಇಒ ಕೆ.ಎಸ್.ಸುರೇಶ್, ಚುನಾವಣಾ ಶಿರಸ್ಥೇದಾರ್ ಹಸೀನಬೇಗಂ, ತರಬೇತುದಾರ ಶ್ರೀಧರ, ಓಬಳೇಶ್, ಕಂದಾಯಾಧಿಕಾರಿ ಲಿಂಗೇಗೌಡ, ಗ್ರಾಮ ಲೆಕ್ಕಿಗ ಪ್ರಕಾಶ್, ಡಿ.ಶ್ರೀನಿವಾಸ್ ಮುಂತಾದವರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಲೋಕಸಭೆಯಲ್ಲಿ ಹಿಂದುತ್ವದ ಪ್ರತಿನಿಧಿ ಆಗಿರುವೆ; ಈಶ್ವರಪ್ಪ.

» **ಹೊಸನಗರ**

ರಾಜ್ಯ ಬಿಜೆಪಿಯಲ್ಲಿ ಅಪ್ಪ ಮಕ್ಕಳ ಅತಿರೇಕದ ವರ್ತನೆಯಿಂದ ಅನೇಕ ನಾಯಕರ ಮನಸ್ಸಿಗೆ ನೋವಾಗಿದೆ. ಪಕ್ಷದ ಕಾರ್ಯಕರ್ತರು ನಲುಗಿ ಹೋಗಿದ್ದಾರೆ.ಹೀಗಾಗಿ ಪಕ್ಷದ ಶುದ್ಧಿಕರಣದೊಂದಿಗೆ ಪುನಶ್ಚೇತನ ಬಯಸುತ್ತಿದ್ದಾರೆ.ಇವರ ಪ್ರತಿನಿಧಿಯಾಗಿ ನಾನು ಚುನಾವಣೆಯಲ್ಲಿ ಸ್ಪರ್ಧಿಸುತ್ತಿದ್ದೇನೆ ಎಂದು ಪಕ್ಷೇತರ ಅಭ್ಯರ್ಥಿ, ಮಾಜಿ ಸಚಿವ ಕೆ.ಎಸ್.ಈಶ್ವರಪ್ಪ ತಿಳಿಸಿದರು.ಹೊಸನಗರ – ಸಾಗರ ವಿಧಾನಸಭಾ ಕ್ಷೇತ್ರದ ಚುನಾವಣಾ ಕಾರ್ಯಾಲಯ ಉದ್ಘಾಟನೆ ಮಾಡಿದ ಬಳಿಕ ನಡೆದ ರಾಷ್ಟ್ರಭಕ್ತ ಬಳಗದ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿದ ಅವರು, ನಾನು ರಾಜ್ಯದಲ್ಲಿ ಹಿಂದುತ್ವದ ಪರವಾಗಿ ಹೋರಾಟ ಮಾಡುತ್ತಿರುವವರ ಪ್ರತಿನಿಧಿಯಾಗಿ ಸ್ಪರ್ಧೆ ಮಾಡುತ್ತಿದ್ದೇನೆ ನನಗಿಂತ ದೊಡ್ಡ ಹಿಂದುತ್ವವಾದಿ ಹೋರಾಟಗಾರರು ಇದ್ದಾರೆ ಸಿ.ಟಿ.ರವಿ, ಪ್ರತಾಪ್ ಸಿಂಹ, ಬಸವನಗೌಡ ಪಾಟೀಲ್ ಯತ್ನಾಳ್, ಅನಂತ ಕುಮಾರ್ ಹೆಗ್ಗಡೆ ಇವರೆಲ್ಲಾ ಹಿಂದುತ್ವ ಪರವಾದ ಹೋರಾಟಗಾರರು ಇವರೆಲ್ಲರ ಮನಸ್ಸಿಗೆ ನೋವಾಗಿದೆ. ಪಕ್ಷದ ಪುನಶ್ಚೇತನ ಬಯಸುತ್ತಿದ್ದಾರೆ ಇವರ ಪ್ರತಿನಿಧಿಯಾಗಿ ನಾನು ಕೆಲಸ ಮಾಡುತ್ತಿದ್ದೇನೆ ಎಂದು ತಿಳಿಸಿದರು. ಜಿಲ್ಲೆಯಲ್ಲಿ ಬಿಜೆಪಿ, ಕಾಂಗ್ರೆಸ್ ಎರಡೂ ಪಕ್ಷದ ಹಿಂದುತ್ವವಾದಿ ಕಾರ್ಯಕರ್ತರು ನನ್ನ ಚುನಾವಣಾ ಪ್ರಚಾರ ಕಾರ್ಯಕ್ಕೆ ಜೊತೆಯಾಗಿದ್ದಾರೆ. ನನ್ನ ಗೆಲುವನ್ನು ತಡೆಯಲು ಯಾವ ರಾಜಕೀಯ ಪಕ್ಷದಿಂದಲೂ ಸಾಧ್ಯವಿಲ್ಲ ಎಂದರು. ಮಾಜಿ ಸಚಿವ ಗೂಳಿಹಟ್ಟಿ ಶೇಖರ್ ಮಾತಾಡಿ ಕಳೆದ ನಲವತ್ತು ವರ್ಷಗಳಿಂದ ಶ್ರಮವಹಿಸಿ ದುಡಿದು ಪಕ್ಷ ಕಟ್ಟಿದ ವ್ಯಕ್ತಿಗೆ ಏಕಾಏಕಿ ಹಿನ್ನೆಲೆಗೆ ಸರಿಸಿದ್ದು ಒಬ್ಬ ನಿಷ್ಠಾವಂತ ಕಾರ್ಯಕರ್ತನಿಗೆ ಮಾಡದ ಅವಮಾನ ಅದಕ್ಕಾಗಿ ನಾನೇ ಸ್ವಯಂ ಈಶ್ವರಪ್ಪನವರಿಗೆ ಬೆಂಬಲ ಸೂಚಿಸಿ ಜಿಲ್ಲೆಯಾದ್ಯಂತ ಪ್ರಚಾರ ಕಾರ್ಯದಲ್ಲಿ ತೊಡಗಿದ್ದೇನೆ.

### ಮಹಾವೀರ ಜಯಂತಿ

» **ದಾವಣಗೆರೆ**

ಜಿಲ್ಲಾಡಳಿತ ವತಿಯಿಂದ ಏಪ್ರಿಲ್ 21 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಡಳಿತ ಭವನದಲ್ಲಿ ಶ್ರೀಭಗವಾನ್ ಮಹಾವೀರ ಜಯಂತಿಯನ್ನು ನೀತಿಸಂಹಿತೆ ಹಿನ್ನಲೆ ಸರಳ ಹಾಗೂ ಸಂಕೇತಿಕವಾಗಿ ಆಚರಿಸಲಾಗುವುದೆಂದು ತಿಳಿಸಿದ್ದಾರೆ.

# ದೇಶದಲ್ಲಿ ಅಂತರ್ ಜಲ ಮಟ್ಟ ಕಡಿಮೆಯಾಗುತ್ತಿದೆ

» **ನಾಗತಿಹಳ್ಳಿಮಂಜುನಾಥ್**

ಹೊಸದುರ್ಗ:ಮಾನವನ ಸ್ವಾರ್ಥತೆಯಿಂದ ಇಂದು ನಮ್ಮ ಬದುಕು ಎಂಬುದು ದುಸ್ಥಿತಿಗೆ ಬಂದಿದೆ,ಗಿಡಮರಗಳ ನಾಶದಿಂದ ಪರಿಸರ ಅಸಮತೋಲನೆಯಲ್ಲಿದೆ ಇಡೀ ದೇಶದಲ್ಲಿ ಇಂದು ಅಂತರ್‌ಜಲ ಮಟ್ಟ ಕಡಿಮೆಯಾಗಿದೆ, ಕೇಂದ್ರ ಸರ್ಕಾರದ ಮಹತ್ವಕಾಂಕ್ಷೆ ಯೋಜನೆಯಾದ ಜಲಶಕ್ತಿ ಅಭಿಯಾನ ಯೋಜನೆಯೂ ಕೂಡ ಜಾಗೃತಿ ಮೂಡಿಸುವ ಕೆಲಸ ಮಾಡಬೇಕಿದೆ, ಇಡೀ ದೇಶದಲ್ಲಿ ಅಂತರ್ ಜಲ ಮಟ್ಟ ಕಡಿಮೆಯಾಗುತ್ತಿದೆ, ಸುಧಾರಿಸುವ ನಿಟ್ಟಿನಲ್ಲಿ ಅಂತರ್ ಜಲವನ್ನ ಹೆಚ್ಚಿಸುವುದು, ನೀರಿನ ಬಳಕೆಯನ್ನ ಮಿತವಾಗಿ ಬಳಸುವುದು,ನೀರಿನ ಬಳಕೆಯ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವ ಬಗ್ಗೆ, ನೀರಿನ ಸದ್‌ಬಳಖೆಯ ಜಾಗೃತಿಯ ಅರಿವಿನ ಬಗ್ಗೆ ಕಾರ್ಯಕ್ರಮಗಳನ್ನ ಜಾಗೃತಿಗೊಳಿಸುವುದು ಉತ್ತಮ.

ಜನರಲ್ಲಿ ಜಾಗೃತಿ ಮೂಡಬೇಕಿದೆ, ಪ್ರತಿಯೊಬ್ಬರೂ ಸಹಾ ಜಲ ಸಂರಕ್ಷಣೆ ಮತ್ತು ಮಳೆ ನೀರಿನ ಕೋಯ್ಲು ಬಗ್ಗೆ ಜಾಗೃತಿ ವಹಿಸಬೇಕಿದೆ, ನಿಮ್ಮ ಸುತ್ತಮುತ್ತಲ ಪರಿಸರದಲ್ಲಿ ಗಿಡಗಳನ್ನ ನೆಟ್ಟು ಬೆಳೆಸಬೇಕು,ಗಿಡಗಳನ್ನು ನೆಟ್ಟು ಬೆಳಸಿದರೆ ಗಿಡಗಳ ಮುಖಾಂತರ ನೀರು ಭೂಮಿಯನ್ನ ಸೇರುತ್ತದೆ,ನೀರನ್ನು ಸಂಗ್ರಹಿಸುವಲ್ಲಿ ಗಿಡ ಮರಗಳು ಪ್ರಮುಖ ಪಾತ್ರ ವಹಿಸುತ್ತವೆ,ಗಿಡ ಮರಗಳು ನೀರನ್ನ ಭೂಮಿಯ ಕೆಳ ಭಾಗಕ್ಕೆ ತಗೆದುಕೊಂಡು



ಹೋಗುತ್ತವೆ,ನೀರು ನೆಲದಲ್ಲಿ ಇಂಗುವಂತೆ ಮಾಡುವುದು ಅತ್ಯವ್ಯಕವಾಗಿದೆ. ಪರಿಸರ ಇಂದು ಅಸಮತೋಲನೆಯಲ್ಲಿದೆ ಸಮತೋಲನೆ ಕಾಪಾಡಿಕೊಳ್ಳುವಲ್ಲಿ ನಾವು ವಿಫಲರಾಗಿದ್ದೇವೆ, ಇದಕ್ಕೆ ಕಾರಣ ನಾವೇ ಆಗಿದ್ದೇವೆ, ಗಿಡಮರಗಳನ್ನು ಕಡಿದು ನಾಡನ್ನು ಹಾಳು ಮಾಡಿದ್ದೇವೆ, ನೀರನ್ನ ಕಾಪಾಡುವ ನಿಟ್ಟಿನಲ್ಲಿ ನಾವು ಜಾಗೃತರಾಗಬೇಕಾಗಿದೆ, ಪ್ರತಿಯೊಬ್ಬರೂ ಸಹಾ ಮನೆಯ ಅಕ್ಕ ಪಕ್ಕದಲ್ಲಿ ಹೆಚ್ಚಾಗಿ ಗಿಡಗಳನ್ನು ನೆಟ್ಟು ಬೆಳೆಸುವ ಕೆಲಸವಾಗಬೇಕು, ನಾವು ಗಿಡ ಮರಗಳನ್ನ ಬೆಳಸದೆ ಹೋದರೆ ನೀರಿನ ಸಂರಕ್ಷಣೆ ಯಾಗದಿದ್ದರೆ ಅತಿ ವೃಷ್ಟಿ ಹಾಗೂ ಅನಾವೃಷ್ಟಿಗೆ ನಾವೇ ನೇರ ಹೊಣೆಯಾಗುತ್ತೇವೆ ನಮ್ಮ ಸುತ್ತಮುತ್ತಲ ಪರಿಸರನ್ನ ಸ್ವಚ್ಛವಾಗಿಡುವುದು ನಮ್ಮ ನಿಮ್ಮೆಲ್ಲರ ಹೊಣೆಯಾಗಿದೆ. ಅನೇಕ ಕಡೆಗಳಲ್ಲಿ ನೀರು ವ್ಯರ್ಥವಾಗಿ ಹರಿದು ಚರಂಡಿ ಸೇರುತ್ತಿರುವುದು ವಿಷಾದನೀಯ.

ಹೊಸದುರ್ಗ ಪಟ್ಟಣದಲ್ಲಿ ನೀರು ಹಾಗೂ ಸ್ವಚ್ಚತೆಯ ಸಮಸ್ಯೆ ಎದುರಾಗಿದೆ. ಮಳೆಯಿಲ್ಲದ ಕಾರಣ ಬೊರ್‌ವೇಲ್‌ಗಳಲ್ಲಿ ಹನಿ ನೀರಿಲ್ಲ ಇದರಿಂದ ಸಾರ್ವಜನಿಕರಿಗೆ ಟ್ಯಾಂಕರ್ ನೀರು ಒದಗಿಸುವ ಅನಿವಾರ್ಯತೆ ಎದುರಾಗಿದೆ.ಈ ಬಗ್ಗೆ ಪುರಸಭೆ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವ ದಿನಗಳು ಹತ್ತಿರ ಬರುತ್ತಿವೆ.

# ಸೇವಾ ನ್ಯೂನ್ಯತೆ, ಗ್ರಾಹಕರ ಕೋರ್ಟ್‌ನಿಂದ ರೂ.4.96 ಲಕ್ಷ ಪರಿಹಾರ ನೀಡಲು ಆದೇಶ

» **ದಾವಣಗೆರೆ**

ದಾವಣಗೆರೆ ನಗರದ ಖಾಸಗಿ ಆಸ್ಪತ್ರೆಯ ವೈದ್ಯರು ದೋಷ ಪೂರಿತ ವೈದ್ಯಕೀಯ ಸೇವೆಗೆ ಪರಿಹಾರವಾಗಿ ನಷ್ಟ ಅನುಭವಿಸಿದ ರೋಗಿಗೆ ರೂ.4,36,626 ಪರಿಹಾರ ಹಾಗೂ ಮಾನಸಿಕ ವೇದನೆ, ಪ್ರಕರಣದ ಖರ್ಚಾಗಿ ರೂ.60 ಸಾವಿರ ಭರಿಸುವಂತೆ ದಾವಣಗೆರೆ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ ಆದೇಶಿಸಿದೆ.

ದಾವಣಗೆರೆ ನಿವಾಸಿ ಟಿ. ಕುಮಾರ ಅವರು ತಮ್ಮ ಎಡಗೈಗೆ ಉಂಟಾದ ಗಾಯಕ್ಕೆ ಚಿಕಿತ್ಸೆ ಕೋರಿ 2022 ರ ಫೆಬ್ರವರಿ 2 ರಂದು ದಾವಣಗೆರೆಯ ಖಾಸಗಿ ಆಸ್ಪತ್ರೆಯಲ್ಲಿ ವೈದ್ಯರಿಗೆ ತೋರಿಸಿದಾಗ ವೈದ್ಯರು ಎಡಕ್ಕೆ ಮೂಳೆ ಮುರಿದಿದ್ದು, ಅದಕ್ಕಾಗಿ ಶಸ್ತ್ರ ಚಿಕಿತ್ಸೆ ಮಾಡಬೇಕಾಗಬಹುದೆಂದು ನಿರ್ಧರಿಸಿ ರೋಗಿಗೆ 2022 ರ ಫೆಬ್ರವರಿ 16 ರಂದು ಶಸ್ತ್ರಚಿಕಿತ್ಸೆ ನಡೆಸಿ 2022 ರ ಫೆಬ್ರವರಿ 21 ರಂದು ಬಿಡುಗಡೆ ಮಾಡಿದ್ದರು.



ಆದರೆ ಗುಣಹೊಂದದೇ ಇರುವುದರಿಂದ, ರೋಗಿಯುಸರ್ಕಾರಿಆಸ್ಪತ್ರೆಯಲ್ಲಿಸಮಾಲೋಚಿಸಿದಾಗ ಎಡಗೈ ಮೂಳೆ ಸರಿಯಿರುವುದು ಎಕ್ಸರೇ ವರದಿಯಿಂದ ತಿಳಿದು ಬಂದಿರುತ್ತದೆ. ಸರ್ಕಾರಿ ಆಸ್ಪತ್ರೆ ವೈದ್ಯರು ರೋಗಿಗೆ ಹೆಚ್ಚಿನ ಚಿಕಿತ್ಸೆ ಪಡೆಯಲು ನೀಡಿದ ಸಲಹೆಗೆ ರೋಗಿಯು ಮಣಿಪಾಲ ಆಸ್ಪತ್ರೆಯಲ್ಲಿ ಹೆಚ್ಚಿನ ಚಿಕಿತ್ಸೆಗೆ ದಾಖಲಾಗಿ ಶಸ್ತ್ರಚಿಕಿತ್ಸೆ ಮಾಡಿಸಿಕೊಂಡಿರುತ್ತಾರೆ.

ರೋಗಿವು ದಾವಣಗೆರೆ ಖಾಸಗಿ ಆಸ್ಪತ್ರೆ ವೈದ್ಯರು ಸೇವಾ ನ್ಯೂನ್ಯತೆ ಮಾಡಿದ ಬಗ್ಗೆ ಸಕ್ಷಮ ಪ್ರಾಧಿಕಾರದೊಂದಿಗೆ ಪತ್ರ ವ್ಯವಹಾರ ನಡೆಸಿ, ತಪ್ಪಿತಸ್ತ ವೈದ್ಯರ ಮೇಲೆ ಸೂಕ್ತ ಕ್ರಮಕ್ಕಾಗಿ ಆಶ್ರಯಿಸಿದ್ದರು. ಆದರೆ, ಸೂಕ್ತ ಕ್ರಮ ಜರುಗಿಸಲು ಒಪ್ಪದ ಪ್ರಾಧಿಕಾರ, ವೈದ್ಯರನ್ನು ತಪ್ಪಿತಸ್ತರಲ್ಲ ಎಂದು ನಿರ್ಧರಿಸಿ ಹಿಂಬರಹ ನೀಡಿತ್ತು.

ಪ್ರಾಧಿಕಾರ ಕ್ರಮ ಪ್ರಶ್ನಿಸಿ ಮತ್ತು ಸೂಕ್ತ ಚಿಕಿತ್ಸೆ ನೀಡಲು ನಿರ್ಲಕ್ಷ್ಯ ವಹಿಸಿದ್ದು ವೈದ್ಯರಿಂದ ಪರಿಹಾರ ಕೋರಿ, ದೂರುದಾರ ಕುಮಾರ.ಟಿ. ಅವರು ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗಕ್ಕೆ ದೂರನ್ನು ಸಲ್ಲಿಸಿದ್ದರು.

ಸದರಿ ಪ್ರಕರಣದಲ್ಲಿ ಎದುರುದಾರರಾಗಿ ಹಾಜರಾದ ವೈದ್ಯರು ತಮ್ಮ ಕ್ರಮವನ್ನು ಸಮರ್ಥಿಸಿಕೊಂಡಿದ್ದರು. ದೂರುದಾರರುಹಾಜರುಪಡಿಸಿದಸೂಕ್ತದಾಖಲೆಗಳನ್ನು ಮತ್ತು ಉಭಯ ಪಕ್ಷಗಾರರ ಅಹವಾಲನ್ನು ಪರಿಶೀಲಿಸಿದ ಆಯೋಗ, ದೂರುದಾರರು ಸಲ್ಲಿಸಿದ ದೂರನ್ನು ಪುರಸ್ಕರಿಸಿ, ಎದುರುದಾರ ವೈದ್ಯರು ಸೇವೆ ನೀಡುವಲ್ಲಿ ನಿರ್ಲಕ್ಷ್ಯ ವಹಿಸಿದ್ದಾರೆಂದು ನಿರ್ಣಯಿಸಿ, ಎದುರುದಾರ ವೈದ್ಯರು, ನೊಂದ ದೂರುದಾರ ಗ್ರಾಹಕ ರೋಗಿಗೆ ಪರಿಹಾರ ರೂಪವಾಗಿ ಒಟ್ಟು ರೂ.4,36,626 ಮತ್ತು ಮಾನಸಿಕ ವೇದನೆ ಮತ್ತು ಪ್ರಕರಣದ ಖರ್ಚು ಒಟ್ಟು ರೂ.60,000/– ನೀಡಲು ಆದೇಶಿಸಿ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷರಾದ ಮಹಂತೇಶ ಈರಪ್ಪ ಶಿಗ್ಲಿ, ಸದಸ್ಯರಾದ ತ್ಯಾಗರಾಜನ್ ಮತ್ತು ಮಹಿಳಾ ಸದಸ್ಯರಾದ ಬಿ.ಯು. ಗೀತಾ ಇವರು ಆದೇಶಿಸಿದ್ದಾರೆ.







Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T